ಶನಿವಾರ 15.11.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 100
Digital Varthe Kannada Daily
Volume 01 - Issue 100
Saturday 15.11.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ಕೊನೆಕ್ಷಣದಲ್ಲಿ ರಾಜ್ಯದ ಜನತೆಗೆ ತಿಮ್ಮಕ್ಕನ ಭಾವನಾತ್ಮಕ ಸಂದೇಶ



**ಬೆಂಗಳೂರು/ತುಮಕೂರು**: ಜಗತ್ತಿನಲ್ಲಿ ಯಾವುದು ಶಾಶ್ವತವಲ್ಲ, ಯಾರಿಗೂ ತೊಂದರೆ, ಹಿಂಸೆಯಾಗದಂತೆ ಪ್ರೀತಿಯಿಂದ ಬದುಕಿ ಎಂದು ಅಜ್ಜಿ ವೃಕ್ಷಮಾತೆ ಸಾಲುಮರದ ತಿಮ್ಮಕ್ಕ ಅವರು ಅಂತಿಮ ಕ್ಷಣದಲ್ಲಿ ಭಾವುಕರಾಗಿ ರಾಜ್ಯದ ಜನತೆಗೆ ಸಂದೇಶವನ್ನು ನೀಡಿದ್ದಾರೆ.

ಪತ್ರದ ಮೂಲಕ ಭಾವನಾತ್ಮಕ ಸಂದೇಶ ನೀಡಿರುವ ಅವರು, ಎಲ್ಲರಿಗೂ ಸತಿಪತಿ ಭಾಗ್ಯ ಇರಲಿ, ಮಕ್ಕಳ ಭಾಗ್ಯವಿರಲಿ, ನಿಮ್ಮ ಮನೆ ಚೆನ್ನಾಗಿರಲಿ, ದೇಶ ಚೆನ್ನಾಗಿರಲಿ, ಮಕ್ಕಳಿಗೆಲ್ಲ ಒಳ್ಳೆಯ ವಿದ್ಯೆ ಸಿಗಲಿ, ಎಲ್ಲರೂ ಗಿಡ ಮರಗಳನ್ನು ಬೆಳೆಸಿ ಎಂದು ಪ್ರೀತಿಯ ನನ್ನ ನಾಡಿನ ಜನತೆಗೆ ನಿಮ್ಮ ಪ್ರೀತಿಯ ಅಜ್ಜಿ ವೃಕ್ಷಮಾತೆ ಸಾಲುಮರದ ತಿಮ್ಮಕ್ಕ ಮಾಡುವ ನಮಸ್ಕಾರಗಳು ಎಂದು ತಿಳಿಸಿದ್ದಾರೆ ಈ ಜಗತ್ತಿನಲ್ಲಿ ಯಾವುದು ಶಾಶ್ವತವಲ್ಲ, ಇರುವಷ್ಟು ದಿನ ಯಾರಿಗೂ ತೊಂದರೆ, ಹಿಂಸೆಯಾಗದಂತೆ ಪ್ರೀತಿಯಿಂದ ಬದುಕಿ. ಬಡವ, ಶ್ರೀಮಂತ, ಭಿಕ್ಷುಕ, ಅಸಹಾಯಕ ಎನ್ನದೇ ಎಲ್ಲರೂ ಒಂದೇ ತರಹ ಬದುಕಿ. ಎಲ್ಲರನ್ನು ಗೌರವಿಸಿ, ಪ್ರೀತಿಸಿ. ದೇಶವನ್ನು ಪ್ರೀತಿಸಿ, ದೇಶ ಚೆನ್ನಾಗಿದ್ದರೆ ಎಲ್ಲರೂ ಚಂದ. ಚಿಕ್ಕವರಾಗಲಿ, ದೊಡ್ಡವರಾಗಲಿ, ಬಡವರಾಗಲಿ, ಶ್ರೀಮಂತರಾಗಲಿ, ಗಿಡ ನೆಟ್ಟು ಮರಗಳನ್ನಾಗಿ ಬೆಳೆಸಿರಿ.

ಗೋ ಕಟ್ಟೆಗಳನ್ನು ಕಟ್ಟಿಸಿ, ಕೆರೆ ಕಟ್ಟಿಸಿ, ಮೂಕ ಪ್ರಾಣಿಗಳಿಗೆ ನೀರಿನ ವ್ಯವಸ್ಥೆ ಮಾಡಿಸಿ, ಹಣ್ಣು ಬಿಡುವ ಮರಗಳನ್ನು ಬೆಳೆಸಿ, ಹಕ್ಕಿಪಕ್ಷಿಗಳ ಆಧಾರವಾಗಲಿ, ದೇಶದಲ್ಲಿರುವ ಎಲ್ಲರಿಗೂ ಒಳ್ಳೆಯದಾಗಲಿ, ದೇಶ ಚೆನ್ನಾಗಿರಲಿ ಬಡವನನ್ನು ಕಂಡು ಭಿನ್ನ ಭೇಧ ಮಾಡಬೇಡಿ. ಮನುಷ್ಯರೆಲ್ಲ ಒಂದೇ, ಹಸಿದವರಿಗೆ ಅನ್ನ ಕೊಡಿ. ನಾನು ಮಾಡಿದ ಗಿಡ ನೆಡುವ, ಉಳಿಸುವ ಕಾರ್ಯವನ್ನು ನಿರಂತರವಾಗಿ ಮುಂದುವರಿಸಿ ಎಂದು ಮನವಿ ಮಾಡಿಕೊಂಡಿದ್ದಾರೆ.

ನನ್ನ ಮಗನಾದ ಉಮೇಶ ದೇಶದಲ್ಲೆಲ್ಲ ಗಿಡ ನೆಡುವ ಮತ್ತು ನಡೆಸುವ ಕಾರ್ಯ ಮಾಡುತ್ತಾ ಸಾಗು. ಮತ್ತೊಮ್ಮೆ ಎಲ್ಲರಿಗೂ ದೇವರು ಒಳ್ಳೆಯದು ಮಾಡಲಿ, ನನ್ನ ಪತಿ ದೇವರ ಆಶೀರ್ವಾದ ಮತ್ತು ನನ್ನ ಆಶೀರ್ವಾದ ನನ್ನ ಮಗನ ಮೇಲಿರಲಿ ಎಂದಿದ್ದಾರೆ.

## ಹೋಟಲ್‌ನಲ್ಲಿ ಮಲಗಿದ್ದಲ್ಲೇ ಕೊಲೆಯದ ಯುವಕ



**ರಾಮನಗರ:** ಆತ ಖಾಸಗಿ ಹೋಟೆಲ್‌ವೊಂದರಲ್ಲಿ ಸೆಕ್ಯೂರಿಟಿ ಗಾರ್ಡ್ ಆಗಿ ಕೆಲಸ ಮಾಡುತ್ತಿದ್ದ. ಎಂದಿನಂತೆ ಗುರುವಾರ ರಾತ್ರಿ ಕೂಡ ಕೆಲಸಕ್ಕೆ ಬಂದವನು ಹೋಟೆಲ್‌ನಲ್ಲಿ ಮಲಗಿದ್ದ. ಆದರೆ ತಡರಾತ್ರಿ ದುಷ್ಕರ್ಮಿಗಳು ಆತನನ್ನು ಭೀಕರವಾಗಿ ಕೊಲೆ ಮಾಡಿದ್ದಾರೆ. ನಿಶಾಂತ್ (25) ಕೊಲೆಯಾದ ಯುವಕ. ಹತ್ಯೆ ನಂತರ ಸಿಸಿ ಕ್ಯಾಮೆರಾದ ಡಿವಿಆರ್ ಅನ್ನು ಸಹ ತೆಗೆದುಕೊಂಡು ಹೋಗಿದ್ದಾರೆ. ಸದ್ಯ ಯುವಕನ ಹತ್ಯೆ ಸಾಕಷ್ಟು ಅನುಮಾನಗಳಿಗೆ ಕಾರಣವಾಗಿದೆ

**ನಡೆದದ್ದೇನು?**

ರಾಮನಗರ ತಾಲೂಕಿನ ಬಿಡದಿ ಸಮೀಪದ ಲಕ್ಷ್ಮಿಸಾಗರ ಗ್ರಾಮದ ಬಳಿಯ ಬೆಂಗಳೂರು-ಮೈಸೂರು ಹೆದ್ದಾರಿ ಪಕ್ಕದಲ್ಲಿರುವ ಕದಂಬ ಹೋಟೆಲ್‌ನಲ್ಲಿ ಸೆಕ್ಯೂರಿಟಿ ಗಾರ್ಡ್ ಆಗಿ ಕೆಲಸ ನಿರ್ವಹಿಸುತ್ತಿದ್ದ ನಿಶಾಂತ್‌ನನ್ನು ದುಷ್ಕರ್ಮಿಗಳು ಹೋಟೆಲ್‌ನಲ್ಲಿಯೇ ಮಾರಕಾಸ್ತ್ರದಿಂದ ಕೊಚ್ಚಿ ಭೀಕರವಾಗಿ ಹತ್ಯೆ ಮಾಡಿದ್ದಾರೆ.. ಬೆಂಗಳೂರು ದಕ್ಷಿಣ ಜಿಲ್ಲೆಯ ಚನ್ನಪಟ್ಟಣ ತಾಲ್ಲೂಕಿನ ಕೊಂಡಾಪುರ ಗ್ರಾಮದ ನಿಶಾಂತ್, ಕಳೆದ ಎರಡುವರೆ ತಿಂಗಳಿಂದ ಸೆಕ್ಯೂರಿಟಿ ಗಾರ್ಡ್ ಆಗಿ ಕೆಲಸ ಮಾಡುತ್ತಿದ್ದ. ರಾತ್ರಿ ವೇಳೆ ಹೋಟಲ್ ಕಾವಲು ಕಾಯುತ್ತಿದ್ದ ನಿಶಾಂತ್, ನಿನ್ನೆ ರಾತ್ರಿ ಕೂಡ ಕೆಲಸಕ್ಕೆ ಬಂದಿದ್ದ. 12 ಗಂಟೆ ವೇಳೆ ಹೋಟೆಲ್‌ಗೆ ಹಾಲು ಸಹ ಇಳಿಸಿಕೊಂಡಿದ್ದ. ಆದರೆ ಆನಂತರ ಎಂಟ್ರಿ ಕೊಟ್ಟ ದುಷ್ಕರ್ಮಿಗಳು ಆತನನ್ನು ಕೊಲೆ ಮಾಡಿದ್ದಾರೆ.

**ಮಹಿಳೆಗೆ ಮೆಸೇಜ್ ಮಾಡಿದ್ದ ನಿಶಾಂತ್**

ಅಂದಹಾಗೆ ಸೆಕ್ಯೂರಿಟಿ ಗಾರ್ಡ್ ನಿಶಾಂತ್ ಕೊಲೆ ಪ್ರಕರಣ ಸಾಕಷ್ಟು ಅನುಮಾನಕ್ಕೆ ಕಾರಣವಾಗಿದೆ. ರಾತ್ರಿ ವೇಳೆ ಕದಂಬ ಹೋಟೆಲ್‌ನಲ್ಲಿ ಕೆಲಸ ಮಾಡುತ್ತಿದ್ದ ನಿಶಾಂತ್, ಬೆಳಗಿನ ಸಮಯದಲ್ಲಿ ಬೆಂಗಳೂರಿನ ಕೋಣನಕುಂಟೆಯಲ್ಲಿ ಕೆಲಸ ಮಾಡುತ್ತಿದ್ದ. ಇತ್ತೀಚಿಗೆ ಓರ್ವ ಮಹಿಳೆಗೆ ವಾಟ್ಸಪ್ ಮೂಲಕ ಮೆಸೇಜ್ ಮಾಡಿದ್ದ. ಈ ಸಂಬಂಧ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿ, ಪೊಲೀಸರು ನಿಶಾಂತ್‌ನನ್ನ ಕರೆಸಿ ಎಚ್ಚರಿಕೆ ನೀಡಿ ಕಳುಹಿಸಿದ್ದರು.

ಇನ್ನು ಗ್ರಾಮದಲ್ಲಿ ಯಾರೊಂದಿಗೂ ವೈಷಮ್ಯ ಮಾಡಿಕೊಳ್ಳದ ನಿಶಾಂತ್‌ಗೆ ಯಾರು ಶತ್ರುಗಳಿರಲಿಲ್ಲ. ಹೀಗಿರುವಾಗ ಕೊಲೆಯಾಗಿರುವುದು ಸಾಕಷ್ಟು ಅನುಮಾನಕ್ಕೆ ಎಡೆ ಮಾಡಿಕೊಟ್ಟಿದೆ. ಈ ನಿಟ್ಟಿನಲ್ಲಿ ಕೂಡ ಬಿಡದಿ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಎಸ್‌ಪಿ ಶ್ರೀನಿವಾಸ್ ಗೌಡ ಸಹ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ. ಒಟ್ಟಾರೆ ತಡರಾತ್ರಿ ಹೋಟೆಲ್‌ನಲ್ಲಿ ನಡೆದಿರುವ ಯುವಕನ ಭೀಕರ ಹತ್ಯೆ ಬಿಡದಿ ಭಾಗದ ಜನರನ್ನ ಬೆಚ್ಚಿ ಬೀಳುವಂತೆ ಮಾಡಿದೆ. ಈ ನಿಟ್ಟಿನಲ್ಲಿ ಪ್ರಕರಣ ದಾಖಲಿಸಿಕೊಂಡಿರುವ ಬಿಡದಿ ಠಾಣೆ ಪೊಲೀಸರು ವಿವಿಧ ಆಯಾಮಗಳಲ್ಲಿ ತನಿಖೆ ಆರಂಭಿಸಿದ್ದು, ಆರೋಪಿಗಳ ಬಂಧನಕ್ಕೆ ಬಲೆ ಬೀಸಿದ್ದಾರೆ.

## ದೆಹಲಿ-ಮುಂಬೈ ಎಕ್ಸ್‌ಪ್ರೆಸ್ ವೇಯಲ್ಲಿ ನಿಯಂತ್ರಣ ತಪ್ಪಿ ಕಂದಕಕ್ಕೆ ಬಿದ್ದ XUV ಕಾರು – 5 ಮಂದಿ ಸಾವು

**ನವದೆಹಲಿ:** ನಿಯಂತ್ರಣ ತಪ್ಪಿ XUV 700 ಕಾರು ಕಂದಕಕ್ಕೆ ಬಿದ್ದ ಪರಿಣಾಮ ಐವರು ಸಾವನ್ನಪ್ಪಿರುವ ಘಟನೆ ದೆಹಲಿ-ಮುಂಬೈ ಎಕ್ಸ್‌ಪ್ರೆಸ್ ವೇನಲ್ಲಿ ನಡೆದಿದೆ.ಮೃತರನ್ನು ಮುಂಬೈನ ಕುರ್ಲಾದ ಗುಲಾಮ್ ರಸೂಲ್ (70), ಅಬ್ದುಲ್ ಗುಲಾಮ್ (35), ಡ್ಯಾನಿಶ್ (15), ದುರ್ಗೇಶ್ ಪ್ರಸಾದ್ (35) ಹಾಗೂ ವಡೋದರಾದ ಖಾಲಿಸ್ (35) ಎಂದು ಗುರುತಿಸಲಾಗಿದೆ ನ.13ರಂದು ಬೆಳಿಗ್ಗೆ 7ಗಂಟೆ ಸುಮಾರಿಗೆ ದೆಹಲಿ ಹಾಗೂ ಮುಂಬೈ ಎಕ್ಸ್‌ಪ್ರೆಸ್ ವೇಯಲ್ಲಿನ ಭೀಮಪುರ ಗ್ರಾಮದ ಬಳಿ ಅಪಘಾತ ಸಂಭವಿಸಿದೆ. MH03 EL 1388 ನಂಬರಿನ ಕಾರು ದೆಹಲಿಯಿಂದ ಗುಜರಾತ್ ಕಡೆಗೆ ಪ್ರಯಾಣಿಸುತ್ತಿದ್ದರು. ಈ ವೇಳೆ ಚಾಲಕನ ನಿಯಂತ್ರಣ ತಪ್ಪಿದ್ದು, ಪರಿಣಾಮ ಕಾರು ಕಂದಕಕ್ಕೆ ಬಿದ್ದಿದೆ.



ಕಾರು ಕಂದಕಕ್ಕೆ ಬಿದ್ದ ದೃಶ್ಯ ಸ್ಥಳದಲ್ಲೇ ಇದ್ದ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ವೇಗವಾಗಿ ಬಂದ ಕಾರು ಡಿವೈಡರ್ ದಾಟಿ, ರಸ್ತೆಯ ಮಧ್ಯೆಯಲ್ಲಿದ್ದ ಮಾಹಿ ನದಿಯ ಕಂದಕಕ್ಕೆ ಉರುಳಿದೆ. ಪರಿಣಾಮ ಕಾರಿನ ಮುಂಭಾಗ ಹಾಗೂ ಮೇಲ್ಭಾಗ ನಜ್ಜುಗುಜ್ಜಾಗಿದ್ದು, ನಂಬರ್ ಪ್ಲೇಟ್ ಅಪಘಾತದ ಸ್ಥಳದಿಂದ ಸ್ವಲ್ಪ ದೂರದಲ್ಲಿ ಪತ್ತೆಯಾಗಿದೆ. ಅವಘಡದಲ್ಲಿ ಓರ್ವ ಬಾಲಕ ಸೇರಿ ಐವರು ಸಾವನ್ನಪ್ಪಿದ್ದಾರೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ. ಮೃತದೇಹಗಳನ್ನು ಹೊರತೆಗೆಯಲು ಸ್ಥಳೀಯರು ಪೊಲೀಸರಿಗೆ ಸಹಾಯ ಮಾಡಿದ್ದು, ಶವಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಿದ್ದಾರೆ

## ಮುಂಬೈ-ಬೆಂಗಳೂರು ಹೆದ್ದಾರಿಯಲ್ಲಿ ಭೀಕರ ಅಪಘಾತ ಐವರು ಸಾವು



**ಪುಣೆ:** ಮುಂಬೈ-ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಭಯಾನಕ ಅಪಘಾತ ಸಂಭವಿಸಿ, ಐವರು ಸಾವನ್ನಪ್ಪಿದ್ದಾರೆ ಮತ್ತು 10ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಪುಣೆಯ ಹೊರವಲಯದಲ್ಲಿರುವ ಸೆಲ್ಫಿ ಪಾಯಿಂಟ್ ಬ್ರಿಡ್ಜ್ ಮತ್ತು ನವಲೆ ಸೇತುವೆ ಬಳಿ ಈ ದುರಂತ ನಡೆದಿದೆ. ಅತೀ ವೇಗದಲ್ಲಿ ಬಂದ ಕಂಟೈನರ್ ಟ್ರಕ್ ನಿಯಂತ್ರಣ ತಪ್ಪಿ ಹೆದ್ದಾರಿಯಲ್ಲಿ ಮುಂದೆ ಸಾಗುತ್ತಿದ್ದ 15ಕ್ಕೂ ಹೆಚ್ಚು ವಾಹನಗಳ ಮೇಲೆ ಹರಿದಿದೆ. ಈ ಸರಣಿ ಡಿಕ್ಕಿಯಿಂದ ಕಾರುಗಳು, ಟ್ರಕ್‌ಗಳು ಅಪ್ಪಚ್ಚಿಯಾಗಿ, ಬೆಂಕಿ ಹೊತ್ತಿಕೊಂಡು ಸಂಪೂರ್ಣ ಭಸ್ಮವಾಗಿವೆ. ಘಟನೆಯ ತೀವ್ರತೆಯಿಂದ ಹೆದ್ದಾರಿ ಕಿಲೋಮೀಟರ್ ಗಳವರೆಗೆ ಟ್ರಾಫಿಕ್ ಜಾಮ್ ಉಂಟಾಗಿದ್ದು, ಪೊಲೀಸರು ಬದಲಿ ಮಾರ್ಗಗಳನ್ನು ಸೂಚಿಸಿ ವಾಹನ ಸಂ ಚಾ ರ ವ ನ್ನು ನಿಯಂತ್ರಿಸುತ್ತಿದ್ದಾರೆ.

**ಘಟನೆಯ ವಿವರ**

ವೇಗವಾಗಿ ಬಂದ ಕಂಟೈನರ್ ಟ್ರಕ್ ನಿಯಂತ್ರಣ ತಪ್ಪಿ ಹೆದ್ದಾರಿಯಲ್ಲಿ ಸಾಲು ಸಾಲು ನಿಂತಿದ್ದ ವಾಹನಗಳ ಮೇಲೆ ಟ್ರಕ್ ಹರಿದು ಹೋಗಿದೆ. ಟ್ರಕ್ ಹರಿದ ಪರಿಣಾಮ ಬೆಂಕಿ ಹೊತ್ತಿಕೊಂಡಿದ್ದು, ಕಾರು ಸಂಪೂರ್ಣ ನಜ್ಜುಗುಜ್ಜಾಗಿ ಭಸ್ಮವಾಗಿದೆ. ಟ್ರಕ್ ಸಹ ಬೆಂಕಿಗೆ ಆಹುತಿಯಾಗಿದೆ. ಪ್ರಾಥಮಿಕ ವರದಿಯಂತೆ, ಮೂರು ವಾಹನಗಳು ಬೆಂಕಿಯಲ್ಲಿ ಸುಟ್ಟುಹೋಗಿವೆ.

ಅಪಘಾತದಲ್ಲಿ ಮೃತಪಟ್ಟ ಐವರಲ್ಲಿ ಹೆಚ್ಚಿನವರು ಕಾರಿನಲ್ಲಿದ್ದವರು ಎಂದು ತಿಳಿದುಬಂದಿದೆ. ಗಾಯಾಳುಗಳಲ್ಲಿ ಕೆಲವರ ಪರಿಸ್ಥಿತಿ ಗಂಭೀರವಾಗಿದ್ದು, ಅವರನ್ನು ತಕ್ಷಣ ಸ್ಥಳೀಯ ಆಸ್ಪತ್ರೆಗಳಿಗೆ ರವಾನಿಸಲಾಗಿದೆ. ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಬೆಂಕಿಯನ್ನು ನಂದಿಸಿ, ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದಿದ್ದಾರೆ.

ಪುಣೆ ಸಿಟಿ ಪೊಲೀಸ್ ಡಿಸಿಪಿ ಸಂಭಾಜಿ ಕದಮ್ ಸ್ವತಃ ಸ್ಥಳಕ್ಕೆ ಆಗಮಿಸಿ ಪರಿಶೀಲಿಸಿದರು. "ಐವರು ಮೃತಪಟ್ಟಿದ್ದು, 10ಕ್ಕೂ ಹೆಚ್ಚು ಗಾಯಾಳುಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ. ಗಾಯಾಳುಗಳ ರಕ್ಷಣೆ ಮತ್ತು ಚಿಕಿತ್ಸೆಗೆ ಆದ್ಯತೆ ನೀಡಿದ್ದೇವೆ. ಟ್ರಾಫಿಕ್ ಜಾಮ್ ಸರಿದೂಗಿಸಲು ಬದಲಿ ಮಾರ್ಗಗಳನ್ನು ತೆರೆಯಲಾಗಿದೆ" ಎಂದು ಡಿಸಿಪಿ ಕದಮ್ ಹೇಳಿದ್ದಾರೆ.

## ಅನ್ಯ ಭಾಷಿಕರನ್ನ ಕರ್ನಾಟಕದವರು ಪ್ರೀತಿಯಿಂದ ಕಾಣುತ್ತಿದ್ದಾರೆ: ಕೆಬಿ ಚಂದ್ರಶೇಖರ್



ಪಟ್ಟಣದ ಟಿ.ಬಿ ವೃತ್ತದಲ್ಲಿ ಕರ್ನಾಟಕ ಯುವ ರಕ್ಷಣಾ ವೇದಿಕೆ ವತಿಯಿಂದ 70ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಧ್ವಜ ಆರೋಹಣ ಮಾಡಿ ಮಾತನಾಡಿದ ರವರು ಹೊರ ರಾಜ್ಯ ಮತ್ತು ಹೊರ ದೇಶದ ಜನರನ್ನು ಪ್ರೀತಿಯಿಂದ ನೋಡುವ ನಾಡು ನಮ್ಮದು ಹೊರ ರಾಜ್ಯದ ಜನರು ಕನ್ನಡ ಭಾಷೆಯನ್ನು ಕಲಿಯಬೇಕು ಎಂದು ಮನವಿ ಮಾಡುವ ಮೂಲಕ ನಮ್ಮ ಕನ್ನಡ ಬಾಷೆ ಸಾವಿರಾರು ಇತಿಹಾಸವನ್ನು ಕಂಡ ನಾಡು ಕನ್ನಡವನ್ನ ಪ್ರೀತಿಸಬೇಕು, ಕನ್ನಡವನ್ನು ಬೆಳೆಸುವ ಮೂಲಕ ಕನ್ನಡ ನಾಡಿಗೆ ಗೌರವ ನೀಡಬೇಕು ಎಂದು ಸಲಹೆ ನೀಡಿದರು,

ನಂತರ ತಾಯಿ ಭುವನೇಶ್ವರಿಯ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಶ್ರೀ ಸ್ವತಂತ್ರ ಸಿದ್ದಲಿಂಗೇಶ್ವರ ಗವಿಮಠದ ಸ್ವಾಮೀಜಿಗಳಾದ ಶ್ರೀ ಚನ್ನವೀರ ಮಹಾಸ್ವಾಮೀಜಿ ರವರು ಈ ದಿನ ಕರ್ನಾಟಕ ಯುವ ರಕ್ಷಣಾ ವೇದಿಕೆ ತಾಲೂಕು ಘಟಕದ ವತಿಯಿಂದ 79ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಒಗ್ಗಟ್ಟಿನಿಂದ ಮಾಡುತ್ತಿರುವುದು ಸಂತಸ ತಂದಿದೆ ಹಾಗೆ ನಮ್ಮ ನೆಲ ಜಲ ಭಾಷೆ ಸುರಕ್ಷತೆ ಎಲ್ಲಾದರೂ ಇದೆ ಅಂದರೆ ಅದು ನಮ್ಮ ಕರ್ನಾಟಕದಲ್ಲಿ ಮಾತ್ರ ಎಲ್ಲರಿಗೂ ಆಶ್ರಯ ಕೊಡುವ ಮೂಲಕ ಮಾದರಿ ಆಗಿದೆ, ನಮ್ಮ ಕರ್ನಾಟಕದ ಭೂಮಿಯಲ್ಲಿ ಹುಟ್ಟಿರೋದು ನಮ್ಮ ಪೂರ್ವ ಜನ್ಮದ ಪುಣ್ಯ, ಮುಂದಿನ ಪೀಳಿಗೆಗೆ ಬರುವ ವಿದ್ಯಾರ್ಥಿಗಳು ಮತ್ತು ಮಕ್ಕಳು ಒಳ್ಳೆಯ ಸಂಸ್ಕಾರವನ್ನ ಕಲಿಯಬೇಕು ಎಂದು ತಿಳಿಸಿದರು,

ಕಾರ್ಯಕ್ರಮದಲ್ಲಿ ಮಕ್ಕಳ ದಿನಾಚರಣೆಯ ಅಂಗವಾಗಿ ಪಟ್ಟಣದ ಗ್ರಾಮ ಭಾರತಿ ಪ್ರೌಢಶಾಲೆ, ಕೆಪಿಎಸ್ ಹಿರಿಯ ಪ್ರಾಥಮಿಕ ಶಾಲೆ, ಆಶೀರ್ವಾದ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಪ್ರೌಢಶಾಲೆಯ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ತಾಲೂಕು ಅಧ್ಯಕ್ಷರಾದ ಜಾವಿಧ್ ರವರ ನೇತೃತ್ವದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ನಂತರ ಜಯನಗರ ಬಡಾವಣೆ ಅಂಗನವಾಡಿ ಕೇಂದ್ರ, ಸುಭಾಷ್ ನಗರ ಅಂಗನವಾಡಿ ಕೇಂದ್ರ, ಹಳೆ ಮಾರ್ಕೆಟ್ ಅಂಗನವಾಡಿ ಕೇಂದ್ರ, ಬಸವನಗುಡಿ ಅಂಗನವಾಡಿ ಕೇಂದ್ರದ ಮಕ್ಕಳಿಗೆ ಬುಕ್ ಮತ್ತು ಲೇಖನಿ ಸಾಮಗ್ರಿಗಳನ್ನ ವಿತರಿಸಲಾಯಿತು,

ನಂತರ ಕರ್ನಾಟಕ ಯುವ ರಕ್ಷಣಾ ವೇದಿಕೆಯ ಮಂಡ್ಯ ಜಿಲ್ಲಾ ಮಹಿಳಾ ಘಟಕದ ಜಿಲ್ಲಾಧ್ಯಕ್ಷರಾದ ರೋಜಾ ರವರು ಅನ್ನ ಸಂತರ್ಪಣೆಗೆ ಚಾಲನೆ ನೀಡಿದರು,

ಕಾರ್ಯಕ್ರಮದಲ್ಲಿ ಕರ್ನಾಟಕ ಯುವ ರಕ್ಷಣಾ ವೇದಿಕೆಯ ಕೃಷ್ಣರಾಜಪೇಟೆಯ ತಾಲೂಕು ಮಹಿಳಾ ಘಟಕದ ಗೌರವ ಅಧ್ಯಕ್ಷರಾಗಿ ಬಿ.ಎಸ್. ವಿದ್ಯಾ ರವರನ್ನ ನೇಮಕ ಮಾಡಲಾಗಿತ್ತು,

ಕಾರ್ಯಕ್ರಮದಲ್ಲಿ ತಾಲೂಕಿನ ಜನಪ್ರಿಯ ಮಾಜಿ ಶಾಸಕರಾದ ಕೆ.ಬಿ. ಚಂದ್ರಶೇಖರ್ ರವರು ಶ್ರೀ ಸ್ವತಂತ್ರ ಸಿದ್ದಲಿಂಗೇಶ್ವರ ಗವಿಮಠದ ಪೀಠಾಧ್ಯಕ್ಷರಾದ ಶ್ರೀ ಸ್ವತಂತ್ರ ಚನ್ನವೀರ ಮಹಾಸ್ವಾಮೀಜಿಗಳು, ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರಾದ ಬಳ್ಳೆಕೆರೆ ವಿಜಯ್ ಕುಮಾರ್ ರವರು, ಕರ್ನಾಟಕ ಯುವ ರಕ್ಷಣಾ ವೇದಿಕೆಯ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ರೋಜಾ, ತಾಲೂಕು ಅಧ್ಯಕ್ಷ ಜಾವಿಧ್, ತಾಲೂಕು ಮಹಿಳಾ ಅಧ್ಯಕ್ಷೆ ರೋಷನ್ ಭಾನು, ನಗರ ಘಟಕದ ಅಧ್ಯಕ್ಷ ಮಂಜುನಾಥ್ ಎಲ್.ಪಿ, ನೂತನವಾಗಿ ಸೇರ್ಪಡೆಗೊಂಡ ಮಹಿಳಾ ಘಟಕದ ತಾಲೂಕು ಗೌರವ ಅಧ್ಯಕ್ಷೆ ವಿದ್ಯಾ ಬಿ.ಎಸ್, ತಾಲೂಕು ಕಾರ್ಮಿಕ ಘಟಕದ ಅಧ್ಯಕ್ಷ ನಿಸರ್ ಅಹಮದ್, ತಾಲೂಕು ಮಹಿಳಾ ಕಾರ್ಯದರ್ಶಿ ರಾಧಾ ಎಲ್‌ಆರ್, ತಾಲ್ಲೂಕು ಮಹಿಳಾ ಘಟಕದ ಉಪಾಧ್ಯಕ್ಷೆ ಲೀಲಾವತಿ, ಲಕ್ಷ್ಮಮ್ಮ, ದೇವಿರಮ್ಮ ಸೇರಿದಂತೆ ಕರ್ನಾಟಕ ಯುವ ರಕ್ಷಣಾ ವೇದಿಕೆಯ ಎಲ್ಲಾ

## ಬೀದಿನಾಯಿ ದಾಳಿಗೆ ವ್ಯಕ್ತಿ ಬಲಿ ಕಣ್ಣುಗುಡ್ಡೆಯನ್ನೇ ಕಿತ್ತು ಹಾಕಿದ ಡೆಡ್ಲಿ ಶ್ವಾನ





**ಮಂಗಳೂರು, ನವೆಂಬರ್ 14:** ಬೀದಿನಾಯಿಗಳ ಹಾವಳಿ ತಡೆಗಟ್ಟಲು ಎಷ್ಟೇ ಕ್ರಮಕೈಗೊಂಡರು ಕೂಡ ಶ್ವಾನ ದಾಳಿ ಮುಂದುವರಿಯುತ್ತಲೇ ಇದೆ. ಇದೀಗ ಕಡಲನಗರಿ ಮಂಗಳೂರಿನಲ್ಲಿ ಬೀದಿನಾಯಿ ದಾಳಿಗೆ ವ್ಯಕ್ತಿಯೊಬ್ಬರು ಸಾವಿಗೀಡಾದ (death) ಆಘಾತಕಾರಿ ಘಟನೆ ಬೆಳಕಿಗೆ ಬಂದಿದೆ. ಬೆಳ್ಳಂ ಬೆಳಿಗ್ಗೆ ಅಟ್ಟಾಡಿಸಿ ದಾಳಿ ಮಾಡಿರುವ ಡೆಡ್ಲಿ ನಾಯಿ ಮೃತ ವ್ಯಕ್ತಿಯ ಕಣ್ಣುಗುಡ್ಡೆಯನ್ನೇ ತಿಂದು ಹಾಕಿದೆ. ದಯಾನಂದ (60) ಮೃತ ವ್ಯಕ್ತಿ. ಜನ ವಸತಿ ಪ್ರದೇಶದಲ್ಲಿ ರಕ್ತಸಿಕ್ತ ಸ್ಥಿತಿಯಲ್ಲಿ ಮೃತದೇಹ ಪತ್ತೆಯಾಗಿದೆ. ಸದ್ಯ ಬೀದಿ ನಾಯಿಯನ್ನು ಪುರಸಭೆ ಸಿಬ್ಬಂದಿಗಳು ಸೆರೆ ಹಿಡಿದಿದ್ದಾರೆ.

ದಕ್ಷಿಣ ಕನ್ನಡ ಜಿಲ್ಲೆಯ ಉಳ್ಳಾಲ ತಾಲೂಕಿನ ಕುಂಪಲ ಬೈಪಾಸ್ ಸಮೀಪದ ಜನವಸತಿ ಪ್ರದೇಶದಲ್ಲಿ ಘಟನೆ ನಡೆದಿದೆ. ಬೀದಿ ನಾಯಿ ದಾಳಿಗೆ ಕುಂಪಲ ಗ್ರಾಮದ ನಿವಾಸಿ ದಯಾನಂದ ಅವರು ಮೃತಪಟ್ಟಿದ್ದಾರೆ. ಅವಿವಾಹಿತರಾಗಿದ್ದ ದಯಾನಂದ, ಕುಡಿತದ ಚಟ ಹೊಂದಿದ್ದು ರಾತ್ರಿ ವೇಳೆ ಸ್ಥಳೀಯವಾಗಿ ನೇಮ, ಕೋಲ, ಜಾತ್ರೆಗಳಿಗೆ ತೆರಳಿ ಕುಂಪಲದ ಅಂಗಡಿ ಮುಂಭಾಗ ಮಲಗಿ ಬೆಳಗ್ಗಿನ ವೇಳೆ ಮನೆ ಸೇರುತ್ತಿದ್ದರು.

ಇಂದು ಮುಂಜಾನೆ 3:30ರ ವೇಳೆಗೆ ಅಂಗಡಿಯೊಂದರ ಮುಂಭಾಗ ದಯಾನಂದ ಇದ್ದಿದ್ದನ್ನು ಅಂಗಡಿ ಮಾಲೀಕ ವಿನೋದ್ ಎಂಬುವವರು ನೋಡಿದ್ದಾರೆ. ಆದಾದ ಬಳಿಕ ಬೆಳಗ್ಗೆ 7:30ರ ಸುಮಾರಿಗೆ ಪಕ್ಕದ ಅಂಗಡಿಯೊಂದರ ಮುಂಭಾಗ ವ್ಯಕ್ತಿಯೊಬ್ಬರ ಕಣ್ಣು ಗುಡ್ಡೆಯೊಂದು ಬಿದ್ದಿರೋದು, ರಕ್ತಸಿಕ್ತವಾಗಿರೋದು ಕಂಡು ಬಂದಿದೆ. ಇನ್ನಷ್ಟು ಪರಿಶೀಲನೆ ಮಾಡಿದಾಗ ಅಂಗಡಿ ಸಮೀಪದ ಮನೆಯೊಂದರ ಮುಂಭಾಗ ದಯಾನಂದ ಮೃತದೇಹ ಪತ್ತೆಯಾಗಿದೆ. ಮೃತದೇಹ ಪಕ್ಕದಲ್ಲೇ ನಾಯಿ ಕೂಡ ಇದ್ದು ಬೀದಿ ನಾಯಿ ದಾಳಿಯ ಅನುಮಾನ ಇನ್ನಷ್ಟು ಬಲವಾಗಿತ್ತು.

ಸೋಮೇಶ್ವರ ಪುರಸಭಾ ವ್ಯಾಪ್ತಿಯ ಕುಂಪಲದಲ್ಲಿ ಬೀದಿನಾಯಿಗಳ ಹಾವಳಿ ವಿಪರೀತವಾಗಿರುವ ಬಗ್ಗೆ ಸ್ಥಳೀಯರು ದೂರಿದ್ದಾರೆ. ಘಟನಾ ಸ್ಥಳಕ್ಕೆ ಉಳ್ಳಾಲ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಎಫ್‌ಎಸ್‌ಎಲ್, ಸೋಕೋ ತಂಡ ಭೇಟಿ ನೀಡಿ ಸಾಕ್ಷ್ಯಗಳನ್ನು ಸಂಗ್ರಹಿಸಿದ್ದಾರೆ. ಬೀದಿನಾಯಿಗಳ ನಿಯಂತ್ರಣಕ್ಕೆ ಕ್ರಮಕೈಗೊಳ್ಳುವುದಾಗಿ ಸೋಮೇಶ್ವರ ಪುರಸಭಾ ಉಪಾಧ್ಯಕ್ಷ ರವಿಶಂಕರ್ ಹೇಳಿದ್ದಾರೆ. ಬೀದಿನಾಯಿ ದಾಳಿಗೆ ವ್ಯಕ್ತಿ ಮೃತಪಟ್ಟಿರುವ ಬಗ್ಗೆ ಜನ ಆಘಾತ ವ್ಯಕ್ತಪಡಿಸಿದ್ದಾರೆ. ದೊಡ್ಡವರನ್ನೇ ಬಿಡದ ಬೀದಿನಾಯಿಗಳು ಮಕ್ಕಳನ್ನು ಜೀವಂತ ಬಿಡಬಹುದಾ ಎಂದು ಪೋಷಕರು ಆತಂಕ ವ್ಯಕ್ತಪಡಿಸಿದ್ದಾರೆ. ಒಟ್ಟಿನಲ್ಲಿ ಇನ್ನೊಂದು ಪ್ರಾಣ ಹೋಗುವ ಮೊದಲು ಬೀದಿನಾಯಿಗಳ ಹಾವಳಿಯನ್ನು ನಿಯಂತ್ರಿಸಲು ಆಡಳಿತ ವ್ಯವಸ್ಥೆ ಕ್ರಮಕೈಗೊಳ್ಳಬೇಕಾಗಿದೆ.

**ನವೆಂಬರ್ 27 ರಂದು ನಿಮ್ಮ ಡಿಜಿಟಲ್ ವಾರ್ತೆ ದಿನಪತ್ರಿಕೆ ಹಾಗೂ ಡಿಜಿಟಲ್ ವಾಹಿನಿ ನೂತನ ಕಚೇರಿ ಉದ್ಘಾಟನೆಗೊಳ್ಳಲಿದ್ದು , ಸರ್ವರಿಗೂ ಆತ್ಮೀಯ ಆಮಂತ್ರಣ**

## ಮರಕ್ಕೆ ಸಾರಿಗೆ ಬಸ್ ಡಿಕ್ಕಿ - 10ಕ್ಕೂ ಹೆಚ್ಚು ಮಂದಿಗೆ ಗಾಯ, ಐವರ ಸ್ಥಿತಿ ಗಂಭೀರ



**ಹಾಸನ:** ಚಾಲಕನ ನಿತಂತ್ರಣ ತಪ್ಪಿ ಸಾರಿಗೆ ಬಸ್ ಮರಕ್ಕೆ ಡಿಕ್ಕಿಯಾದ ಘಟನೆ ಅರಸೀಕೆರೆಯ ಗೀಜಿಹಳ್ಳಿ ಬಳಿ ನಡೆದಿದೆ. ಬಸ್ ಅಪಘಾತದಲ್ಲಿ ಹತ್ತಕ್ಕೂ ಹೆಚ್ಚು ಮಂದಿಗೆ ಗಾಯವಾಗಿದ್ದು, ಐವರ ಸ್ಥಿತಿ ಗಂಭಿರವಾಗಿದೆ. ಪುತ್ತೂರು ಡಿಪೋದ ಬಸ್ ಮಡಿಕೇರಿ ಕಡೆಗೆ ತೆರಳುತ್ತಿತ್ತು. ಈ ವೇಳೆ, ಚಾಲಕನ ನಿಯಂತ್ರಣ ತಪ್ಪಿ ರಸ್ತೆ ಬದಿಯ ಮರಕ್ಕೆ ಡಿಕ್ಕಿ ಹೊಡೆದಿದೆ. ಡಿಕ್ಕಿಯ ಪರಿಣಾಮಕ್ಕೆ ಬಸ್‌ನ ಮುಂಭಾಗ ಸಂಪೂರ್ಣ ನಜ್ಜುಗುಜ್ಜುಗಿದೆ ಗಾಯಾಳುಗಳಿಗೆ ಅರಸೀಕೆರೆ ತಾಲೂಕು ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ಹಾಸನ ಜಿಲ್ಲಾಸ್ಪತ್ರೆಗೆ ರವಾನೆ ಮಾಡಲಾಗಿದೆ. ಸುದ್ದಿ ತಿಳಿದು ಘಟನಾ ಸ್ಥಳ ಹಾಗೂ ಆಸ್ಪತ್ರೆಗೆ ಶಾಸಕ ಕೆ.ಎಂ.ಶಿವಲಿಂಗೇಗೌಡ ಭೇಟಿ ನೀಡಿ ಗಾಯಾಳುಗಳ ಯೋಗಕ್ಷೇಮ ವಿಚಾರಿಸಿದ್ದಾರೆ.

ಸ್ಥಳಕ್ಕೆ ಅರಸೀಕೆರೆ ಗ್ರಾಮಾಂತರ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಜೆಸಿಬಿ ಬಳಸಿ ಬಸ್‌ನ್ನು ತೆರವುಗೊಳಿಸಲಾಗಿದ್ದು, ಸಂಚಾರಕ್ಕೆ ಅನುವು ಮಾಡಿಕೊಡಲಾಗಿದೆ

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ಭರ್ಜರಿ ಮುನ್ನಡೆ ಸಾಧಿಸಿ ಅಧಿಕಾರದತ್ತ ಸಾಗುತ್ತಿರುವ NDA: ಜನರ ತೀರ್ಪು ಒಪ್ಪಿಕೊಳ್ಳಿ ಎಂದ ಸಿದ್ದರಾಮಯ್ಯ



**ಬಿಹಾರ**: ವಿಧಾನಸಭಾ ಚುನಾವಣೆ 2025ರ ಫಲಿತಾಂಶಗಳು ಇಂದು ಹೊರಬೀಳುತ್ತಿದ್ದು, ಬಿಜೆಪಿ ನೇತೃತ್ವದ ರಾಷ್ಟ್ರೀಯ ಪ್ರಜಾತಾಂತ್ರಿಕ ಒಕ್ಕೂಟ (NDA) ಭರ್ಜರಿ ಮುನ್ನಡೆ ಸಾಧಿಸಿ ಅಧಿಕಾರದತ್ತ ಸಾಗುತ್ತಿದೆ. 243 ಕ್ಷೇತ್ರಗಳಲ್ಲಿ NDA 195ಕ್ಕೂ ಹೆಚ್ಚು ಸ್ಥಾನಗಳಲ್ಲಿ ಮುನ್ನಡೆ ಕಾಯ್ದುಕೊಂಡಿದ್ದು, ಎದುರಾಳಿ ಮಹಾಘಟಬಂಧನ್ ಕೇವಲ 45 ಕ್ಷೇತ್ರಗಳಲ್ಲಿ ಮಾತ್ರ ಮುಂದಿದೆ. ಇತರರು 4 ಕ್ಷೇತ್ರಗಳಲ್ಲಿ ಮುನ್ನಡೆಯಲ್ಲಿದ್ದಾರೆ. ಈ ಫಲಿತಾಂಶಗಳು ಚುನಾವಣೆಗೂ ಮುನ್ನ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಭವಿಷ್ಯವನ್ನು ನಿಜಗೊಳಿಸುತ್ತಿದೆ.

ಚುನಾವಣಾ ಪ್ರಚಾರದ ಸಮಯದಲ್ಲಿ ಸುದ್ದಿವಾಹಿನಿಯ ಕಾನ್‌ಕ್ಲೇವ್‌ನಲ್ಲಿ ಮಾತನಾಡಿದ್ದ ಅಮಿತ್ ಶಾ, NDA ಈ ಬಾರಿ 160+ ಸ್ಥಾನಗಳಲ್ಲಿ ಗೆಲುವು ಸಾಧಿಸಿ ಮೂರರಲ್ಲಿ ಎರಡು ಬಹುಮತದೊಂದಿಗೆ ಸರ್ಕಾರ ರಚಿಸಲಿದೆ ಎಂದು ಘೋಷಿಸಿದ್ದರು. ಆದರೆ ಈಗಾಗಲೇ NDA 190+ ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿದ್ದು, ಶಾ ಅವರ 'ಚಾಣಕ್ಯ' ತಂತ್ರಗಳು ಮತ್ತೊಮ್ಮೆ ಯಶಸ್ವಿಯಾಗಿವೆ ಎಂದು ತೋರುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರ ಪ್ರಭಾವವೇ ಈ ಗೆಲುವಿನ ಮೂಲಕಾರಣ ಎಂದು ಬಿಜೆಪಿ ನಾಯಕರು ಹೇಳಿಕೊಳ್ಳುತ್ತಿದ್ದಾರೆ.

ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ, ಬಿಹಾರ ಫಲಿತಾಂಶಗಳ ಕುರಿತು ಪ್ರತಿಕ್ರಿಯಿಸಿದ್ದಾರೆ. ಜನರು ಕೊಟ್ಟ ತೀರ್ಪನ್ನು ಒಪ್ಪಿಕೊಳ್ಳಬೇಕು. ಯಾಕೆ ಹಿನ್ನಡೆ ಆಯ್ತು, ಯಾರು ವೋಟ್ ಹಾಕಲಿಲ್ಲ ಅಂತ ಗೊತ್ತಿಲ್ಲ. NDA ಯಾಕೆ ಇಷ್ಟೊಂದು ದೊಡ್ಡ ಬಹುಮತ ಪಡೆಯುತ್ತಿದೆ ಎಂಬುದೂ ತಿಳಿದಿಲ್ಲ. ಸಂಪೂರ್ಣ ಮಾಹಿತಿ ಪಡೆದು ನಂತರ ಮಾತನಾಡುತ್ತೇನೆ ಎಂದು ಸಿದ್ದರಾಮಯ್ಯ ತಿಳಿಸಿದ್ದಾರೆ. ಕಾಂಗ್ರೆಸ್ ನೇತೃತ್ವದ ಮಹಾಘಟಬಂಧನ್‌ಗೆ ಈ ಸೋಲು ದೊಡ್ಡ ಆಘಾತವಾಗಿದ್ದು, ಒಕ್ಕೂಟದ ಒಗ್ಗಟ್ಟಿನ ಕೊರತೆ ಮತ್ತು ಪ್ರಚಾರದಲ್ಲಿ ತಪ್ಪುಗಳೇ ಕಾರಣ ಎಂದು ಆಂತರಿಕ ಚರ್ಚೆಗಳು ನಡೆಯುತ್ತಿವೆ.

ಬಿಜೆಪಿ ಸಂಸದ ಮನನ್ ಮಿಶ್ರಾ ಅವರು ಈ ಗೆಲುವನ್ನು ಮೋದಿ-ನಿತೀಶ್ ಜೋಡಿಯೇ ಕಾರಣ ಎಂದು ಖುಷಿ ಪಟ್ಟಿದ್ದಾರೆ. NDA ಪೂರ್ಣ ಬಹುಮತದೊಂದಿಗೆ ಸರ್ಕಾರ ರಚಿಸಲಿದೆ. ಇಲ್ಲಿ ಯಾವುದೇ ಬೆದರಿಕೆಗಳು ಕೆಲಸ ಮಾಡುವುದಿಲ್ಲ. ಇಂಡಿ ಒಕ್ಕೂಟದವರು ಈಗ ಮನೆಯಲ್ಲೇ ಅಡಗಿಕೊಂಡಿದ್ದಾರೆ ಎಂದು ಮನನ್ ಮಿಶ್ರಾ ವಾಗ್ದಾಳಿ ನಡೆಸಿದರು. ಇನ್ನೊಂದೆಡೆ, ಕೇಂದ್ರ ಸಚಿವ ಗಿರಿರಾಜ್ ಸಿಂಗ್ ಮಾಮಾತನಾಡಿ, ಬಿಹಾರ ಗೆದ್ದಾಯ್ತು, ಮುಂದೆ ಬಂಗಾಳ ಬಿಹಾರದ ಯುವಕರು ಬುದ್ಧಿವಂತರು. ಇದು ಅಭಿವೃದ್ಧಿಯ ಗೆಲುವು. NDA ಅಧಿಕಾರ ಸ್ಥಾಪಿಸಲಿದೆ ಎಂದು ಹೇಳಿದ್ದಾರೆ. ತಾಜಾ ಮತ ಎಣಿಕೆಯಲ್ಲಿ 191 ಕ್ಷೇತ್ರಗಳಲ್ಲಿ NDA ಮುನ್ನಡೆಯಲ್ಲಿದ್ದು, ಮಹಾಘಟಬಂಧನ್ 48 ಮತ್ತು ಇತರರು 4 ಕ್ಷೇತ್ರಗಳಲ್ಲಿ ಮುಂದಿದ್ದಾರೆ. ಚುನಾವಣಾ ತಂತ್ರಜ್ಞ ಪ್ರಶಾಂತ್ ಕಿಶೋರ್ ಅವರ ಜನ್ ಸುರಾಜ್ ಪಕ್ಷ ಶೂನ್ಯಕ್ಕೆ ಕುಸಿದಿದೆ. ಆದರೆ ಮಹಾಘಟಬಂಧನ್‌ನ ನಾಯಕ ತೇಜಸ್ವಿ ಯಾದವ್ ಅವರು ರಾಘೋಪುರ ಕ್ಷೇತ್ರದಲ್ಲಿ 893 ಮತಗಳ ಮುನ್ನಡೆ ಸಾಧಿಸಿ ಕನಿಷ್ಠ ಆಸರೆ ಕಂಡುಕೊಂಡಿದ್ದಾರೆ.

# ಸಾಲುಮರದ ತಿಮ್ಮಕ್ಕ ಬಗ್ಗೆ ಮಾತಾಡಲು ಒದ್ದಾಡಿದ್ದ ರಶ್ಮಿಕಾ



ವೃಕ್ಷಮಾತೆ ಎಂದೇ ಜನಪ್ರಿಯತೆ ಪಡೆದಿದ್ದ ಸಾಲು ಮರದ ತಿಮ್ಮಕ್ಕ ಇಂದು (ನವೆಂಬರ್ 14) ನಿಧನರಾಗಿದ್ದಾರೆ. ಅವರಿಗೆ ಬರೋಬ್ಬರಿ 114 ವರ್ಷ ವಯಸ್ಸಾಗಿತ್ತು. 1911ರಲ್ಲಿ ಜನಿಸಿದ ಅವರು ಅದೆಷ್ಟೋ ಸಸಿಗಳನ್ನು ನೆಟ್ಟು ನಮ್ಮ ಪರಿಸರಕ್ಕೆ ಕೊಡುಗೆ ನೀಡಿದ್ದಾರೆ. ಕರ್ನಾಟಕ ಮಾತ್ರವಲ್ಲದೆ ಪರಭಾಷೆಯ ವೇದಿಕೆ ಮೇಲೆ ಅವರನ್ನು ಗೌರವಿಸಲಾಗಿತ್ತು. ಒಮ್ಮೆ ತಮಿಳು ವೇದಿಕೆ ಮೇಲೆ ಸಾಲು ಮರದ ತಿಮ್ಮಕ್ಕ ಅವರನ್ನು ಗೌರವಿಸಲಾಯಿತು. ಆಗ ನಡೆದ ಘಟನೆಯನ್ನು ನೆನಪಿಸಿಕೊಳ್ಳಲೇಬೇಕು.

ಜೆಎಫ್‌ಡಬ್ಲ್ಯು ಅಚೀವರ್ಸ್ ಅವಾರ್ಡ್ 2019 ವೇದಿಕೆ ಮೇಲೆ ಸಾಲು ಮರದ ತಿಮ್ಮಕ್ಕ ಅವರನ್ನು ಗೌರವಿಸಲಾಯಿತು. ಆಗ ತಿಮ್ಮಕ್ಕ ಅವರು ಕನ್ನಡದಲ್ಲಿ ಮಾತನಾಡಿ ತಮ್ಮ ಬಗ್ಗೆ ಹೇಳಿಕೊಂಡರು. ಈ ವೇಳೆ ಅದನ್ನು ತಮಿಳು ಅಥವಾ ಇಂಗ್ಲಿಷ್‌ಗೆ ಟ್ರಾನ್ಸಲೇಟ್ ಮಾಡಬೇಕಿತ್ತು. ಆಗ ವೇದಿಕೆ ಮೇಲೆ ರಶ್ಮಿಕಾ ಅವರನ್ನು ಕರೆಸಲಾಯಿತು. ತಿಮ್ಮಕ್ಕ ತಮ್ಮ ಬಗ್ಗೆ ಹೇಳಿಕೊಳ್ಳುತ್ತಿದ್ದರು. ರಶ್ಮಿಕಾ ಅವರು ಪ್ರತಿ ಶಬ್ದ ಕೇಳಿಸಿಕೊಂಡು ಟ್ರಾನ್ಸ್‌ಲೇಟ್ ಮಾಡುತ್ತಿದ್ದರು. ಈ ಕೆಲಸ ಮಾಡಲು ಅವರು ಸಾಕಷ್ಟು ಒದ್ದಾಟ ನಡೆಸಿದರು. ಈ ವೇಳೆ ವೇದಿಕೆ ಮೇಲಿದ್ದ ತಮಿಳು ನಟ ವಿವೇಕ್ ಅವರು, ಸಾಲು ಮರದ ತಿಮ್ಮಕ್ಕ ಬಗ್ಗೆ, ಅವರ ಕಾರ್ಯದ ಬಗ್ಗೆ ನಿರರ್ಗಳವಾಗಿ ಮಾತನಾಡಿದರು.

ತಿಮ್ಮಕ್ಕ ಮಾಡಿದ ಸಾಧನೆ ಅವರ ಬಾಯಲ್ಲೇ ಇತ್ತು. ರಶ್ಮಿಕಾ ಮಂದಣ್ಣ ಕರ್ನಾಟಕದವರು. ಆದಾಗ್ಯೂ ಅವರಿಗೆ ತಿಮ್ಮಕ್ಕನ ಬಗ್ಗೆ ತಿಳಿದಿರಲೇ ಇಲ್ಲ. ಆದರೆ, ಪರಭಾಷಾ ನಟ ವಿವೇಕ್ ಮಾತ್ರ ತಿಮ್ಮಕ್ಕನ ಬಗ್ಗೆ ಮೊದಲೇ ತಿಳಿದುಕೊಂಡು ವಿವರಿಸಿದ್ದರು. ಆ ಬಳಿಕ ವಿವೇಕ್ ಅವರು ತಿಮ್ಮಕ್ಕ ಅವರ ಕಾಲಿಗೆ ಬಿದ್ದು ಆಶೀರ್ವಾದ ಪಡೆದರು. ಈ ವೇಳೆ ರಶ್ಮಿಕಾ ಮಂದಣ್ಣ ಅವರು ಮೌನವಾಗಿ ನೋಡುತ್ತಿದ್ದರು. ಆ ಸಂದರ್ಭದಲ್ಲಿ ವಿವೇಕ್ ನಡೆದುಕೊಂಡ ಬಗ್ಗೆ ಅನೇಕರು ಮೆಚ್ಚುಗೆ ಸೂಚಿಸಿದ್ದರು

## ಒಂದೇ ಹುಡುಗಿ ಮೇಲೆ ಇಬ್ಬರಿಗೆ ಲವ್ ಹುಬ್ಬಳ್ಳಿಯಲ್ಲಿ ಹರಿದಿದ್ದು ನೆತ್ತರ ಕೋಡಿ

**ಹುಬ್ಬಳ್ಳಿ**: ಒಂದೇ ಯುವತಿಯನ್ನು ಇಬ್ಬರು ಪ್ರೀತಿಸಿದ ವಿಚಾರಕ್ಕೆ ನಡೆದ ಗಲಾಟೆ ವಿಕೋಪಕ್ಕೆ ಹೋಗಿ ಇಬ್ಬರು ಯುವಕರಿಗೆ ಚಾಕು ಇರಿದಿರುವ ಘಟನೆ ಹುಬ್ಬಳ್ಳಿ ನಗರದ ಗ್ಲೋಬಲ್ ಕಾಲೇಜು ಮುಂಭಾಗ ನಡೆದಿದೆ. ಗಾಯಾಳು ಯುವಕರನ್ನು ಕಿಮ್ಸ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದ್ದು, ಘಟನೆ ಸಂಬಂಧ ಪ್ರಮುಖ ಆರೋಪಿ ಸೇರಿ ಒಟ್ಟು 7 ಜನರನ್ನು ಪೊಲೀಸರು ಬಂಧಿಸಿದ್ದಾರೆ.

ಮಣಿಕಂಠ ಮತ್ತು ಪವನ್ ಎಂಬ ವಿದ್ಯಾರ್ಥಿಗಳು ಗ್ಲೋಬಲ್ ಕಾಲೇಜ್‌ನಲ್ಲಿ ಬಿಬಿಎ ಮೊದಲ ವರ್ಷದಲ್ಲಿ ಓದುತ್ತಿದ್ದು, ಇಬ್ಬರೂ ಒಂದೇ ಹುಡುಗಿಯನ್ನ ಪ್ರೀತಿಸುತ್ತಿದ್ದರು. ಇದೇ ವಿಚಾರಕ್ಕೆ ತಿಂಗಳ ಹಿಂದೆ ಇವರ ನಡುವೆ ಗಲಾಟೆಯೂ ನಡೆದಿತ್ತು. ಆದರೆ, ತನ್ನ ಹುಟ್ಟು ಹಬ್ಬದ ಪಾರ್ಟಿ ಇದೆ. ಆಗಿರೋ ಸಮಸ್ಯೆಯನ್ನ ಮಾತುಕತೆ ಮೂಲಕ ಬಗೆಹರಿಸಿಕೊಳ್ಳೋಣ ಎಂದು ಪವನ್‌ನನ್ನು ಮಣಿಕಂಠ ಕರೆದಿದ್ದ. ಹೀಗಾಗಿ ಪಾರ್ಟಿಗೆ ಹೋಗಲು ನಿರ್ಧರಿಸಿದ್ದ ಪವನ್, ಈ ವೇಳೆ ಸ್ನೇಹಿತರಾದ ಹುಬ್ಬಳ್ಳಿ ನಗರದ ದೇಶಪಾಂಡೆ ನಗರದ ನಿವಾಸಿಗಳಾದ ಅಭಿಷೇಕ್ ಬಂಡಿವಂಡರ್ ಮತ್ತು ಮಾರುತಿ ಬಂಡಿವಂಡರ್ ಅವರನ್ನೂ ಜೊತೆಯಲ್ಲಿ ಕರೆದುಕೊಂಡು ಹೋಗಿದ್ದ. ಆದರೆ, ಬರ್ತ್ ಡೇ ಪಾರ್ಟಿ ಆರಂಭಕ್ಕು ಮುನ್ನವೇ ಪವನ್ ಮತ್ತು ಆತನ ಸ್ನೇಹಿತರ ಜೊತೆ ಮಣಿಕಂಠ ಜಗಳ ಆರಂಭಿಸಿದ್ದಾನೆ. ಈ ವೇಳೆ ಗಲಾಟೆ ವಿಕೋಪಕ್ಕೆ ಹೋಗಿದ್ದು, ಮಣಿಕಂಠ ಮತ್ತು ಆತನ ಸ್ನೇಹಿತರು ಅಭಿಷೇಕ್ ಮತ್ತು ಮಾರುತಿಗೆ ಚಾಕು ಇರಿದಿದ್ದಾರೆ. ಗಲಾಟೆ ಜೋರಾಗುತ್ತಿದ್ದಂತೆ ಸ್ಥಳೀಯರು ಸ್ಥಳಕ್ಕೆ ಬಂದ ಕಾರಣ ಆರೋಪಿಗಳು ಎಸ್ಕೇಪ್ ಆಗಿದ್ದಾರೆ. ಆಸ್ಪತ್ರೆಗೆ ನಗರ ಪೊಲೀಸ್ ಆಯುಕ್ತರ ಭೇಟಿ

ಗಲಾಟೆ ವೇಳೆ ಪವನ್ ಪಾರಾಗಿದ್ದರೆ ಆತನ ಸ್ನೇಹಿತರಾದ ಅಭಿಷೇಕ್ ಮತ್ತು ಮಾರುತಿ ಚಾಕು ಇರಿತದಿಂದ ಗಂಭೀರವಾಗಿ ಗಾಯಗೊಂಡಿದ್ದಾರೆ. ಆಟೋ ಓಡಿಸಿಕೊಂಡು ಜೀವನ ನಡೆಸುತ್ತಿದ್ದ ಇವರಿಬ್ಬರು ಸ್ನೇಹಿತನ ಜೊತೆ ಪಾರ್ಟಿಗೆ ಹೋಗಿ ಈಗ ಆಸ್ಪತ್ರೆಯ ಬೆಡ್ ಮೇಲೆ ಮಲಗುವ ಸ್ಥಿತಿ ತಲುಪಿದ್ದಾರೆ. ವಿಷಯ ಗೊತ್ತಾಗುತ್ತಿದ್ದಂತೆ ಹುಬ್ಬಳ್ಳಿ-ಧಾರವಾಡ ನಗರ ಪೊಲೀಸ್ ಆಯುಕ್ತ ಎನ್. ಶಶಿಕುಮಾರ್ ಕಿಮ್ಸ್‌ಗೆ ಭೇಟಿ ನೀಡಿ ಗಾಯಾಳುಗಳ ಆರೋಗ್ಯ ವಿಚಾರಿಸಿದ್ದಾರೆ. ಚಾಕು ಇರಿತ ಪ್ರಕರಣ ಸಂಬಂಧ ವಿದ್ಯಾನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿಗಳನ್ನ ಈಗಾಗಲೇ ಬಂಧಿಸಲಾಗಿದೆ.

## ಬಿಹಾರದ ಫಲಿತಾಂಶದ ಬಗ್ಗೆ 3 ತಿಂಗಳ ಹಿಂದೆಯೇ ಭವಿಷ್ಯ ನುಡಿದಿತ್ತು 'ಮಾಡರ್ನ್ ಅಸ್ಟ್ರಾಲಜಿ



**ಬೆಂಗಳೂರು**: ಬಿಹಾರದಲ್ಲಿ ವಿಧಾನ ಸಭಾ ಚುನಾವಣೆ ಬಿಜೆಪಿ- ಜೆಡಿಯು ಮೈತ್ರಿಯ ಎನ್‌ಡಿಎ ಬಣ ಅಭೂತಪೂರ್ವ ಜಯ ಸಾಧಿಸಿದೆ. ಈ ಫಲಿತಾಂಶದ ಬಗ್ಗೆ 3 ತಿಂಗಳ ಹಿಂದೆಯೇ 'ಮಾಡರ್ನ್ ಅಸ್ಟ್ರಾಲಜಿ' ಭವಿಷ್ಯ ನುಡಿದಿತ್ತು. 'ಮಾಡರ್ನ್ ಅಸ್ಟ್ರಾಲಜಿ' ಮಾಸಪತ್ರಿಕೆಯಲ್ಲಿ ಬಿಹಾರದ ವಿಧಾನಸಭೆ ಚುನಾವಣೆ ಫಲಿತಾಂಶದ ಬಗ್ಗೆ ಬೊಕ್ಕ ಗಾಂಧಿ ಪ್ರಸಾದ್ ಎಂಬುವವರು ಲೇಖನವನ್ನು ಬರೆದಿದ್ದರು. ಅದೇ ಲೇಖನ ಪ್ರಕಟವಾಗಿರುವ ಪುಟದ ಕೆಳ ಭಾಗದಲ್ಲಿ ಸಂಪಾದಕರಿಗೆ ಅದು ತಲುಪಿರುವ ದಿನಾಂಕ ಜೂನ್ 27, 2025 ಎಂದು ಸಹ ತಿಳಿಸಲಾಗಿದೆ. ಬಿಹಾರದ ಚುನಾವಣೆ ಲೇಖನವನ್ನು ಸೆಪ್ಟೆಂಬರ್ ತಿಂಗಳ ಮಾಸಪತ್ರಿಕೆಯಲ್ಲಿ ಪ್ರಕಟಿಸಿದ್ದು, ಅದು ಆಗಸ್ಟ್ ತಿಂಗಳ ಕೊನೆ ಹೊತ್ತಿಗೆ ಮಾರುಕಟ್ಟೆಯಲ್ಲಿ ಲಭ್ಯವಿತ್ತು. ಇನ್ನು ಲೇಖನದಲ್ಲಿ ಬಿಜೆಪಿಯ ಬಗ್ಗೆ ಹೀಗೆ ಬರೆಯಲಾಗಿದೆ: ಭಾರತೀಯ ಜನತಾ ಪಕ್ಷಕ್ಕೆ ಅದು ಸ್ಥಾಪನೆಯಾದ ದಿನದ ಸಮಯದ ಆಧಾರದಲ್ಲಿ ಕುಂಡಲಿಯನ್ನು ತಯಾರಿಸಲಾಗಿದ್ದು, ಜುಲೈ 14, 2025ರಿಂದ ಫೆಬ್ರವರಿ 10,2026ರ ತನಕ ಚಂದ್ರ ದಶೆಯಲ್ಲಿ ಕೇತು ಭುಕ್ತಿ ನಡೆಯುತ್ತದೆ. ಅದರಲ್ಲಿ ರಾಹುವಿನ ಅಂತರ ಭುಕ್ತಿ ಅಕ್ಟೋಬರ್ 12, 2025ರಿಂದ ನವೆಂಬರ್ 13,2025ರ ತನಕ ನಡೆಯುತ್ತದೆ.

ಚಂದ್ರ ದಶೆ ಬಿಜೆಪಿಗೆ ಉತ್ತಮ ಫಲಿತಾಂಶವನ್ನು ನೀಡಿದೆ. ಬುಧಭುಕ್ತಿ ನಡೆಯುವಾಗ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿಗೆ ಪೂರ್ಣ ಬಹುಮತ ಬಾರದೆ ಹೋಗಿರಬಹುದು. ಆದರೂ ಮಿತ್ರ ಪಕ್ಷಗಳ ಜೊತೆಗೂಡಿ ಬಿಜೆಪಿಯೇ ಅಧಿಕಾರದ ಗದ್ದುಗೆ ಹಿಡಿಯುವಲ್ಲಿ ಸಫಲವಾಗಿದೆ. ಕುಜವತ್ ಕೇತುಃ ಎಂಬ ಪ್ರಮಾಣ ಇದ್ದು, ಕೇತು ಗ್ರಹವು ಕುಜ ಗ್ರಹದ ರೀತಿಯಲ್ಲಿಯೇ ಫಲ ನೀಡುತ್ತದೆ. ಅದಕ್ಕೆ ಶನಿ ಗ್ರಹದ ಪ್ರಭಾವ ಇದೆ. ಬಿಜೆಪಿ ಸ್ಥಾಪಿಸಿದ ಕಾಲದಲ್ಲಿ ಶನಿ, ಕುಜ ಹಾಗೂ ವಕ್ರೀ ಗುರು ಸಿಂಹದಲ್ಲಿದ್ದು, ಕುಂಭ ರಾಶಿಯಲ್ಲಿ ಇದ್ ಕೇತುವಿನ ಮೇಲೆ ದೃಷ್ಟಿ ಇತ್ತು.

ಬಿಜೆಪಿ ಸ್ಥಾಪನೆ ಕಾಲದಲ್ಲಿ ಮಿಥುನ ಲಗ್ನ ಇತ್ತು. ಸದ್ಯಕ್ಕೆ ಶನಿ ಮೀನ ರಾಶಿಯಲ್ಲಿ ಸಂಚರಿಸುತ್ತಿದ್ದು, ಪಕ್ಷದ ಮಿಥುನ ಲಗ್ನಕ್ಕೆ ಹತ್ತನೇ ಸ್ಥಾನ ಆಗುತ್ತದೆ. ಇನ್ನು ಮಿಥುನದಲ್ಲಿಯೇ ಗುರು ಸಂಚಾರ ನಡೆಯುವುದು ಇವೆಲ್ಲ ಸೇರಿ ಭಾರತೀಯ ಜನತಾ ಪಕ್ಷವು ತನ್ನ ಪ್ರದರ್ಶನವು ಸುಧಾರಣೆ ಮಾಡಿಕೊಳ್ಳುವುದಕ್ಕೆ ಸಾಧ್ಯವಾಗಲಿದೆ. ನರೇಂದ್ರ ಮೋದಿ ಜಾತಕ ಪರಿಶೀಲನೆ:

ಪಕ್ಷದ ಫಲಿತಾಂಶದ ಮೇಲೆ ಪರಿಣಾಮ ಬೀರುವುದರಲ್ಲಿ ನರೇಂದ್ರ ಮೋದಿ ಪ್ರಮುಖರಾಗುತ್ತಾರೆ. ಆದ್ದರಿಂದ ಅವರ ಜಾತಕ ಪರಿಶೀಲನೆ ಮಾಡುವುದಾದರೆ, ಅಕ್ಟೋಬರ್ 16,2026ರಿಂದ ಡಿಸೆಂಬರ್ 14,2027ರ ತನಕ ಅವರಿಗೆ ಕುಜ ದಶೆಯಲ್ಲಿ ಶುಕ್ರ ಭುಕ್ತಿ ನಡೆಯುತ್ತದೆ. ಶುಕ್ರನ ಅಂತರ ಭುಕ್ತಿ ನಡೆಯುವ ಅಕ್ಟೋಬರ್ 16, 2026ರಿಂದ ಡಿಸೆಬರ್ 24, 2026ರ ತನಕ ಮೋದಿ ಅವರಿಗೆ ಉತ್ತಮ ಸಮಯ ಇರಲಿದ್ದು, ಚುನಾವಣೆಗಳಲ್ಲಿ ಉತ್ತಮ ಫಲಿತಾಂಶ ದೊರೆಯುತ್ತದೆ.

**ಕಾಂಗ್ರೆಸ್ ಜಾತಕ ಹೇಗಿದೆ?:**

ಕಾಂಗ್ರೆಸ್ ಪಕ್ಷ ಸ್ಥಾಪನೆಯ ಆಧಾರದಲ್ಲಿ ನೋಡುವುದಾದರೆ, ಅಕ್ಟೋಬರ್ 14, 2025ರಿಂದ ಏಪ್ರಿಲ್ 11, 2027ರ ತನಕ ಗುರು ದಶೆಯಲ್ಲಿ ರಾಹು ಭುಕ್ತಿ ಇದೆ. ಇನ್ನು ಜುಲೈ 13, 2025ರಿಂದ ಡಿಸೆಂಬರ್ 6, 2025ರ ತನಕ ಶುಕ್ರನ ಅಂತರ ಭುಕ್ತಿ ಇದೆ. ಕಾಂಗ್ರೆಸ್ ಸ್ಥಾಪನೆಯಾಗಿದ್ದು ಮಕರ ಲಗ್ನದಲ್ಲಿ. ಆ ಸಮಯದಲ್ಲಿ ಅಲ್ಲಿಂದ ಆರನೇ ಮನೆಯಲ್ಲಿ ಗುರು ಗ್ರಹ ಇತ್ತು. ಆದ್ದರಿಂದ ಗುರು ದಶೆಯು ಆ ಪಕ್ಷಕ್ಕೆ ಕಹಿಯ ಅನುಭವವನ್ನೇ ನೀಡಿದೆ. ಲೋಕಸಭೆ ಚುನಾವಣೆಯಲ್ಲಿ ಅದರ ಹಿಂದಿನ ಫಲಿತಕ್ಕೆ ಹೋಲಿಸಿದರೆ ಫಲಿತಾಂಶ ಸುಧಾರಣೆ ಕಂಡಿದ್ದರೂ ಅದರಿಂದ ದೊಡ್ಡ ಅನುಕೂಲ ಅಂತೇನೂ ಆಗಲಿಲ್ಲ. ಆ ಪಕ್ಷ ಸ್ಥಾಪನೆಯಾದಾಗ ಕನ್ಯಾ ರಾಶಿಯಲ್ಲಿ ಚಂದ್ರ ಇತ್ತು. ಆ ಕನ್ಯಾ ರಾಶಿಗೆ ಏಳನೇ ಮನೆಯಲ್ಲಿ ಶನಿ ಸಂಚಾರ ಆಗುತ್ತಿದ್ದು, ಆ ಪಕ್ಷದ ಸಾಧನೆಯಲ್ಲಿ ಸುಧಾರಣೆ ಆಗುವ ಯಾವ ಲಕ್ಷಣವೂ ಇಲ್ಲ. ರಾಹುವು ಚಂದ್ರನ ಯುತಿಯಲ್ಲಿ ಇದ್ದ ಸ್ಥಾಪನೆ ಕಾಲದಲ್ಲಿನ ಸ್ಥಿತಿಯು ತಪ್ಪಾದ ನಿರ್ಧಾರಗಳನ್ನು ಕೈಗೊಂಡು, ಅದರ ಫಲವನ್ನು ಪಡೆಯುತ್ತಾರೆ ಎಂಬುದನ್ನು ಸೂಚಿಸುತ್ತದೆ. ನಿತೀಶ್ ಕುಮಾರ್ ಜಾತಕ ವಿಶ್ಲೇಷಣೆ:

ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರ ಜನ್ಮ ಜಾತಕದ ಪ್ರಕಾರ ಮೇ 25, 2023ರಿಂದ ಮೇ 25, 2026ರ ತನಕ ರಾಹು ದಶೆಯಲ್ಲಿ ಶುಕ್ರ ಭುಕ್ತಿ ನಡೆಯುತ್ತದೆ. ಇನ್ನು ಅಕ್ಟೋಬರ್ 21, 2025ರಿಂದ ಮಾರ್ಚ್ 21, 2026ರ ತನಕ ಬುಧನ ಅಂತರ ಭುಕ್ತಿ ನಡೆಯುತ್ತದೆ. ಮಿಥುನ ಲಗ್ನದಲ್ಲಿ ಜನಿಸಿದಂಥ ನಿತೀಶ್ ಅವರಿಗೆ ಜನನ ಕಾಲದಲ್ಲಿ ಶುಕ್ರ, ಹತ್ತನೇ ಮನೆಯಲ್ಲಿ ಇದೆ. ಆದ್ದರಿಂದ ಮುಖ್ಯಮಂತ್ರಿಯಾಗಿ ಅವರೇ ಮುಂದುವರಿಯುವ ಸಾಧ್ಯತೆ ಹೆಚ್ಚು. ಶನಿ ಗ್ರಹವು ಮೀನ ರಾಶಿಯಲ್ಲಿ ಸಂಚರಿಸುತ್ತಿದ್ದು, ಬಿಹಾರದಲ್ಲಿ ಜೆಡಿಯು ಸ್ಥಿತಿ ಸುಧಾರಣೆ ಕಾಣುತ್ತದೆ.

ಹೆಚ್ಚಿನ ಸ್ಥಾನಗಳನ್ನು ಗೆಲ್ಲುವುದರೊಂದಿಗೆ ಎನ್ ಡಿಎ ಮೈತ್ರಿಕೂಟವಾದ ಬಿಜೆಪಿ ಹಾಗೂ ಜೆಡಿಯು ಬಿಹಾರದಲ್ಲಿ ಸರ್ಕಾರ ರಚನೆ ಮಾಡಬಹುದು.

ಇದು ಆ ಲೇಖನದಲ್ಲಿ ಇರುವಂಥ ಅಂಶಗಳಾಗಿವೆ. ಮುಂದಿನ ವರ್ಷದ ವಿಶೇಷ ಸಂಚಿಕೆ ತಯಾರಿಯಲ್ಲಿ ಮುಳುಗಿ ಹೋಗಿದ್ದೇನೆ. ಡಿಸೆಂಬರ್ ಮಧ್ಯದ ಹೊತ್ತಿಗೆ ಮುಂದಿನ ವರ್ಷದ ಪ್ರೆಡಿಕ್ಷನ್ ಬಗ್ಗೆ ಮಾತನಾಡಬಲ್ಲೆ. ಆದರೆ ಸದ್ಯಕ್ಕೆ ಆ ಕುರಿತು ಮಾತನಾಡುವುದು ಸರಿ ಹೋಗುವುದಿಲ್ಲ. ನಮ್ಮ ಮಾಡರ್ನ್ ಅಸ್ಟ್ರಾಲಜಿಯಲ್ಲಿ ಪ್ರಕಟ ಆಗಿರುವ ಬಿಹಾರ ವಿಧಾನಸಭೆ ಚುನಾವಣೆ ಫಲಿತಾಂಶದ ಬಗೆಗಿನ ಲೇಖನದ ಅಂಶಗಳನ್ನು ನೀವು ಬಳಸಿಕೊಳ್ಳಬಹುದು ಎಂದಿದ್ದಾರೆ.

## ಬಾಗಲಕೋಟೆಯಲ್ಲಿ ಭುಗಿಲೆದ್ದ ಕಬ್ಬು ಹೋರಾಟ: ಹೊತ್ತಿಉರಿದ 30 ಟ್ರ್ಯಾಕ್ಟರ್‌ಟ್ರ್ಯಾಕ್ಟರ್



ಬಾಗಲಕೋಟೆ ಜಿಲ್ಲೆಯ ರಬಕವಿ ಬನಹಟ್ಟಿ ತಾಲ್ಲೂಕಿನ ಸಮಿರವಾಡಿಯ ಗೋದಾವರಿ ಸಕ್ಕರೆ ಕಾರ್ಖಾನೆಯ ಆವರಣದಲ್ಲಿ ರೈತರ ಆಕ್ರೋಶ ಭುಗಿಲೆದ್ದು, ಕಬ್ಬು ತುಂಬಿದ್ದ ಸುಮಾರು 50 ಟ್ರ್ಯಾಕ್ಟರ್‌ಗಳಿಗೆ ಬೆಂಕಿ ಹಚ್ಚಲಾಗಿದೆ. ಈ ಘಟನೆಯು ಕಾರ್ಖಾನೆಯ ಒಳಗೆ ಮತ್ತು ಹೊರಗೆ ಜಮಾಯಿಸಿದ್ದ ಎರಡು ಗುಂಪುಗಳ ನಡುವೆ ಉಂಟಾದ ಮಾತಿನ ಚಕಮಕಿಯಿಂದ ಆರಂಭವಾಗಿ, ಕಲ್ಲು ತೂರಾಟದೊಂದಿಗೆ ತೀವ್ರಗೊಂಡಿತು.

ಸಮಿರವಾಡಿ ಸಕ್ಕರೆ ಕಾರ್ಖಾನೆಯ ಗೇಟ್ ಬಳಿ ನೂರಾರು ಜನ ಜಮಾಯಿಸಿದ್ದರು. ಒಂದು ಗುಂಪು ಕಾರ್ಖಾನೆಯ ಒಳಗೆ, ಮತ್ತೊಂದು ಹೊರಗೆ ನಿಂತು ಪ್ರತಿಭಟನೆ ನಡೆಸುತ್ತಿದ್ದವು. ಹೋರಾಟಗಾರರನ್ನು ತಡೆಯಲು ಪೊಲೀಸರು ಬ್ಯಾರಿಕೇಡ್ ಹಾಕಿದ್ದರು. ಆದರೆ, ಎರಡು ಗುಂಪುಗಳ ನಡುವೆ ಅವಾಚ್ಯ ಶಬ್ದಗಳೊಂದಿಗೆ ಬೈದುಕೊಳ್ಳುವಿಕೆ ಆರಂಭವಾಯಿತು. ಏಕಾಏಕಿ ಕಲ್ಲು ತೂರಾಟ ಶುರುವಾಗಿ, ಪ್ರತಿಭಟನಾಕಾರರು ಬ್ಯಾರಿಕೇಡ್ ತಳ್ಳಿ ಒಳಗೆ ನುಗ್ಗಲು ಯತ್ನಿಸಿದರು.

ರೈತರು ತಮ್ಮ ಮೇಲೆ ಆರೋಪ ಹೊರಿಸುವುದನ್ನು ತೀವ್ರವಾಗಿ ತಿರಸ್ಕರಿಸಿ, ಟ್ರ್ಯಾಕ್ಟರ್‌ಗಳಿಗೆ ಬೆಂಕಿ ಹಚ್ಚಿದ್ದು ನಾವಲ್ಲ. ಬಾಕಿ ಬಿಲ್ ಕೇಳಲು ಇಲ್ಲಿಗೆ ಬಂದಿದ್ದೆವು. ನಮ್ಮನ್ನು ಕಾರ್ಖಾನೆ ಒಳಗೆ ಬಿಡಲೇ ಇಲ್ಲ ಎಂದು ರೈತರು ಹೇಳಿದ್ದಾರೆ. ಪೊಲೀಸರು ರೈತರನ್ನು ತಡೆದಿದ್ದರು. ಕಾರ್ಖಾನೆಯವರು ತಮ್ಮ ಜನರನ್ನೇ ಕರೆಸಿದ್ದರು ಎಂದು ಆರೋಪಿಸಲಾಗಿದೆ. ಎಸ್‌ಪಿ ಅವರ ಎದುರೇ ಆ ಕಡೆಯಿಂದ ಕಲ್ಲು ಎಸೆಯಲಾಯಿತು. ನಮ್ಮ ಜನ ಸೇರಿ ಪೊಲೀಸರಿಗೂ ಪೆಟ್ಟು ಬಿದ್ದಿದೆ. ಟ್ರ್ಯಾಕ್ಟರ್‌ಗಳಿಗೆ ಬೆಂಕಿ ಹಚ್ಚಿದ್ದು ಯಾರು ಎಂಬುದು ಗೊತ್ತಿಲ್ಲ ಎಂದು ರೈತ ಮುಖಂಡ ಸುಭಾಷ್ ಶಿರಬೂರ್ ಹೇಳಿದ್ದಾರೆ. ಘಟನೆಯಲ್ಲಿ ಎಎಸ್‌ಪಿ ಮಹಾಂತೇಶ್ ಜಿದ್ದಿ ಅವರ ಕಾಲಿಗೆ ಗಂಭೀರ ಗಾಯವಾಗಿದೆ. ಅವರನ್ನು ಬಾಗಲಕೋಟೆಯ ಖಾಸಗಿ ಆಸ್ಪತ್ರೆಗೆ ರವಾನಿಸಲಾಯಿತು. ಘಟನೆಯ ಹಿನ್ನೆಲೆ ಜಿಲ್ಲಾಡಳಿತ ಮೂರು ತಾಲ್ಲೂಕುಗಳಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿದೆ. ಜಮಖಂಡಿ, ರಬಕವಿ ಬನಹಟ್ಟಿ ಮತ್ತು ಮುಧೋಳ ತಾಲ್ಲೂಕುಗಳಲ್ಲಿ ಮೂರು ದಿನಗಳ ಕಾಲ ನಿಷೇಧಾಜ್ಞೆ ಹೇರಲಾಗಿದೆ. ಪೊಲೀಸರು ಎಲ್ಲಾ ಆಯಾಮಗಳಲ್ಲೂ ತನಿಖೆ ನಡೆಸುತ್ತಿದ್ದಾರೆ.

ಸಚಿವ ತಿಮ್ಮಾಪುರ್ ರೈತರು ಮತ್ತು ಕಾರ್ಖಾನೆ ಮಾಲೀಕರ ನಡುವಿನ ಸಮಸ್ಯೆಯನ್ನು ಬಗೆಹರಿಸುವುದಾಗಿ ಭರವಸೆ ನೀಡಿದ್ದಾರೆ. ಯಾರೇ ಆಗಲಿ ಕಾನೂನು ಕೈಗೆ ತೆಗೆದುಕೊಳ್ಳಬಾರದು. ಶಾಂತಿ ಕಾಪಾಡಿ ಎಂದು ಮನವಿ ಮಾಡಿದ್ದಾರೆ. ಸ್ಥಳಕ್ಕೆ ಇಂದು ಸಚಿವ ತಿಮ್ಮಾಪುರ್ ಭೇಟಿ ನೀಡಲಿದ್ದಾರೆ. ಅವರೊಂದಿಗೆ ಡಿಸಿ ಸಂಗಪ್ಪ, ಎಸ್‌ಪಿ ಸಿದ್ಧಾರ್ಥ್ ಗೋಯಲ್ ಮತ್ತು ಸಿಇಒ ಶಶಿಧರ ಕುರೇರ ಅವರೂ ಸಹ ಭೇಟಿ ನೀಡಲಿದ್ದಾರೆ.

# ವಿಮೆ ಹಣಕ್ಕಾಗಿ ಸಂಚು ಮಾಡಿ ಮಗನನ್ನು ಕೊಂದ ತಂದೆ

ಚೀನಾದ ವ್ಯಕ್ತಿಯೊಬ್ಬರು ತನ್ನ ಮಗನನ್ನು ಕೊಲ್ಲಲು ಸೋದರಸಂಬಂಧಿಯೊಂದಿಗೆ ಸಂಚು ರೂಪಿಸಿದ್ದು, ಇದೀಗ ತನಿಖೆಯಲ್ಲಿ ನಿಜಾಂಶ ತಿಳಿದು ಬಂದಿದೆ. ಕೋರ್ಟ್ ಈ ವ್ಯಕ್ತಿಯನ್ನು ದೋಷಿ ಎಂದು ಹೇಳಿದೆ. ತನ್ನ ಹೆಂಡತಿ ಅಕ್ರಮ ಸಂಬಂಧ ಹೊಂದಿದ್ದಾಳೆ ಎಂದು ತಿಳಿದು ಹೀಗೆ ಮಾಡಿದ್ದಾರೆ. ಈ ಘಟನೆ 2020ರಲ್ಲಿ ನಡೆದಿದ್ದರೂ, ಫುಜಿಯಾನ್ ಪ್ರಾಂತೀಯ ನ್ಯಾಯಾಲಯವು ಇದೀಗ ತೀರ್ಪು ನೀಡಿದೆ. ಸೌತ್ ಚೀನಾ ಮಾರ್ನಿಂಗ್ ಪೋಸ್ಟ್ (SCMP) ವರದಿ ಮಾಡಿರುವ ಪ್ರಕಾರ, ಫುಜಿಯಾನ್ ಪ್ರಾಂತ್ಯದ ಸ್ಯಾನ್ಮಿಂಗ್ ನಗರದ ಜಾಂಗ್, ತನ್ನ ಸೋದರಸಂಬಂಧಿ, ಟ್ರಕ್ ಚಾಲಕನೊಂದಿಗೆ ಪಿತೂರಿ ಮಾಡಿ, ಕಾರು ಅಪಘಾತ ಎಂದು ಸುಳ್ಳು ಹೇಳಿ, ಸ್ವಂತ ಮಗನನ್ನು ಕೊಂದಿದ್ದಾರೆ ಎಂದು ಹೇಳಲಾಗಿದೆ.

ಈ ಪ್ರಕರಣವು ಚೀನಾದ ಸೋಶಿಯಲ್ ಮೀಡಿಯಾದಲ್ಲಿ ಭಾರೀ ಸದ್ದು ಮಾಡಿತ್ತು. ಸಾರ್ವಜನಿಕ ವಲಯದಲ್ಲಿ ಭಾರೀ ವಿರೋಧಕ್ಕೆ ಕಾರಣವಾಗಿತ್ತು. ಅಲ್ಲಿನ ಜನ "ಹುಲಿ ಕೂಡ ತನ್ನ ಮರಿಯನ್ನು ತಿನ್ನುವುದಿಲ್ಲ" ಎಂಬ ಚೀನಾದ ಗಾದೆಯನ್ನು ಘೋಷಣೆ ಹಾಕುತ್ತ ಪ್ರತಿಭಟನೆ ಮಾಡಿದ್ದರು. ಆ ವ್ಯಕ್ತಿಗೆ ಸರಿಯಾದ ಶಿಕ್ಷೆಯಾಗಬೇಕು. ಜಾಂಗ್‌ನ ಸ್ವಾರ್ಥ ಮತ್ತು ದುರಾಸೆಯ ಕೃತ್ಯಕ್ಕೆ ತಕ್ಕ ಪಾಠ ಕಲಿಸಬೇಕು ಎಂದು ಹೇಳಿದ್ದರು. ಪ್ರಕರಣದ ಸಂಪೂರ್ಣ ಮಾಹಿತಿ ಇಲ್ಲಿದೆ:

ಜಾಂಗ್ ತನ್ನ ಹೆಂಡತಿಯೊಂದಿಗೆ ವೈವಾಹಿಕ ಹಾಗೂ ಹಣದ ವಿಚಾರವಾಗಿ ಆಗ್ಗಾಗ್ಗೆ ಜಗಳ ಮಾಡುತ್ತಿದ್ದರು. ಇದಕ್ಕೆ ಸೇಡು ತೀರಿಸಿಕೊಳ್ಳಲು ತನ್ನ ಸ್ವಂತ ಮಗನನ್ನು ಕೊಂದು ಮಗನ ಹೆಸರಿನಲ್ಲಿರುವ ವಿಮಾವನ್ನು ಪಡೆಯುವ ಯೋಜನೆಯನ್ನು ಹಾಕಿದ್ದರು. ಒಂದು ದಿನ ಮಗನ್ನು ಕಾರಿನಲ್ಲಿ ಹೊರಗೆ ಕರೆದುಕೊಂಡು ಹೋಗಿ, ಶಾಪ್‌ವೊಂದರ ಮುಂದೆ ನಿಲ್ಲಿದ್ದಾರೆ. ಮಗನನ್ನು ಇಳಿಯಲು ಹೇಳಿ, ಕಾರಿನ ಬಳಿ ನಿಲ್ಲಿಸಿ, ನಾನು ಶಾಪ್‌ಗೆ ಹೋಗಿ ಬರುವೇ ನೀನು ಇಲ್ಲೇ ಇರು ಎಂದು ಅಂಗಡಿಯ ಒಳಗೆ ಹೋಗಿದ್ದಾರೆ. ಇದೇ ವೇಳೆ ಸೋದರಸಂಬಂಧಿಗೆ ಟ್ರಕ್‌ನ್ನು ಕಾರಿಗೆ ಡಿಕ್ಕಿ ಹೊಡೆಯಲು ಹೇಳಿದ್ದಾರೆ. ಟ್ರಕ್ ಕಾರಿಗೆ ಡಿಕ್ಕಿ ಹೊಡೆದ ರಭಸಕ್ಕೆ ಮಗು ಅಲ್ಲೇ ಸಾವನ್ನಪ್ಪಿದೆ ಎಂದು ತನಿಖೆಯಲ್ಲಿ ಹೇಳಲಾಗಿದೆ.

ಈ ಘಟನೆ 2020ರಲ್ಲಿ ನಡೆದಿದ್ದರೂ, ಪ್ರಕರಣ ತನಿಖೆಯೂ 6 ವರ್ಷಗಳ ವರೆಗೆ ನಡೆದಿದೆ. ಕೋರ್ಟ್ 2021ರಲ್ಲಿ ಮಗುವಿನ ವಿಮಾದ ಜತೆಗೆ ಟ್ರಕ್ ಮಾಲೀಕ ಹಾಗೂ ಡ್ರೈವರ್ ಇಬ್ಬರು ಕೂಡ ಜಾಂಗ್‌ಗೆ ಹಣವನ್ನು ನೀಡಬೇಕು ಎಂದು ಹೇಳಿತ್ತು. ಇದರಿಂದ ಸಂಕಷ್ಟಕ್ಕೆ ಸಿಲುಕಿದ ಟ್ರಕ್ ಡ್ರೈವರ್ ಪೊಲೀಸರ ಮುಂದೆ ನಿಜ ಒಪ್ಪಿಕೊಂಡಿದ್ದಾನೆ. ನನಗೆ ಜಾಂಗ್ ಈ ಕೆಲಸ ಮಾಡಲು ಹೇಳಿದ್ದು, ಅವರು ಪ್ರತ್ಯಕ್ಷವಾಗಿ ಈ ಕೃತ್ಯದಲ್ಲಿ ಭಾಗಿಯಾಗದಿದ್ದರು, ಪರೋಕ್ಷವಾಗಿ ಭಾಗಿಯಾಗಿದ್ದಾರೆ ಎಂದು ಹೇಳಿದ್ದಾನೆ. ಪೊಲೀಸರು ಟ್ರಕ್ ಡ್ರೈವರ್ ಹೇಳಿಕೆ ಆಧಾರದ ಮೇಲೆ ಜಾಂಗ್ ಅವರನ್ನು ತನಿಖೆಗೆ ಒಳಪಡಿಸಿದರು. ತನಿಖೆಯ ವೇಳೆ ಜಾಂಗ್ ಎಲ್ಲವನ್ನು ಬಾಯಿ ಬಿಟ್ಟಿದ್ದಾರೆ.

## ಸಾಲು ಮರದ ತಿಮ್ಮಕ್ಕನಿಗೆ ವಿದಾಯ ಪತ್ರ ಬರೆದ ಆಂಧ್ರ ಡಿಸಿಎಂ ಪವನ್ ಕಲ್ಯಾಣ್



ವೃಕ್ಷಮಾತೆ ಸಾಲು ಮರದ ತಿಮ್ಮಕ್ಕ ಅಗಲಿದ್ದಾರೆ. ಅವರಿಗೆ 114 ವರ್ಷ ವಯಸ್ಸಾಗಿತ್ತು. ತಮ್ಮ ಜೀವತಾವಧಿಯಲ್ಲಿ ಸಾವಿರಾರು ಮರಗಳನ್ನು ನೆಟ್ಟು ಅವುಗಳ ಪಾಲನೆ ಪೋಷಣೆ ಮಾಡಿದ ಸಾಲು ಮರದ ತಿಮ್ಮಕ್ಕ ಕೋಟ್ಯಂತರ ಜನರಿಗೆ ಸ್ಪೂರ್ತಿಯಾಗಿದ್ದಾರೆ. ನಿಜವಾದ ಪರಿಸರವಾದಿ ಆಗಿದ್ದಾರೆ. ಸಾಲು ಮರದ ತಿಮ್ಮಕ್ಕನ ಅಗಲಿಕೆಗೆ ರಾಜ್ಯದ ಸಿಎಂ ಸಿದ್ದರಾಮಯ್ಯ ಸೇರಿದಂತೆ ಹಲವು ಗಣ್ಯರು ಕಂಬನಿ ಮಿಡಿದಿದ್ದಾರೆ. ಕರ್ನಾಟಕದ ಗಣ್ಯರು ಮಾತ್ರವೇ ಅಲ್ಲದೆ ನೆರೆಯ ಆಂಧ್ರ ಪ್ರದೇಶದ ಉಪ ಮುಖ್ಯ ಮಂತ್ರಿ, ನಟ ಪವನ್ ಕಲ್ಯಾಣ್ ಅವರು ಸಹ ಸಾಲುಮರದ ತಿಮ್ಮಕ್ಕನ ಅಗಲಿಕೆಗೆ ತೀವ್ರ ಸಂತಾಪ ವ್ಯಕ್ತಪಡಿಸಿದ್ದು, ಧೀರ್ಘವಾದ ಟ್ವೀಟ್ ಒಂದನ್ನು ಮಾಡಿದ್ದಾರೆ.

'ಆಂಧ್ರ ಪ್ರದೇಶದಲ್ಲಿ, ಪರಿಸರವನ್ನು ರಕ್ಷಿಸುವುದಾಗಿ ಪ್ರತಿಜ್ಞೆ ಮಾಡಿದವರು, ಮರಗಳನ್ನು ನಿರ್ದಯವಾಗಿ ಕಡಿದು, ಕಾಡುಗಳನ್ನು ನಾಶಮಾಡಿ, ಸ್ವಾರ್ಥ ಲಾಭಕ್ಕಾಗಿ ನಮ್ಮ ಪ್ರಮುಖ ಪರಿಸರ ಸಂಪನ್ಮೂಲಗಳ ಕಳ್ಳಸಾಗಣೆಯನ್ನು ಸಕ್ರಿಯಗೊಳಿಸಿದ್ದನ್ನು ನಾವು ನೋಡಿದ್ದೇವೆ. ಆದರೆ ಮತ್ತೊಂದು ದಿಕ್ಕಿನಲ್ಲಿ ಪ್ರಕೃತಿಗೆ ಸಂಪೂರ್ಣ ಸಮರ್ಪಣೆ ಮಾಡಿದ ವಿನಮ್ರ ವ್ಯಕ್ತಿ - ಸಾಲುಮರದ ತಿಮ್ಮಕ್ಕ, "ವೃಕ್ಷಗಳ ತಾಯಿ" ಎಂದು ಕರೆಯಲ್ಪಡುವ ಮಹಿಳೆಯನ್ನು ನಾವು ಕಂಡಿದ್ದೇವೆ' ಎಂದಿದ್ದಾರೆ ಪವನ್ ಕಲ್ಯಾಣ್.

ಕರ್ನಾಟಕದ ಒಂದು ಸಣ್ಣ ಹಳ್ಳಿಯವರಾದ ತಿಮ್ಮಕ್ಕ ಮತ್ತು ಅವರ ಪತಿಗೆ ಮಕ್ಕಳಿಲ್ಲದಿದ್ದಾಗ ತಮ್ಮ ಜೀವನದ ಉದ್ದೇಶವನ್ನು ಕಂಡುಕೊಂಡರು. ಅವರು ಹಸಿರು ಕುಟುಂಬವನ್ನು ಬೆಳೆಸು ನಿರ್ಧಾರ ಮಾಡಿದರು. ಶುದ್ಧ ಪ್ರೀತಿ ಮತ್ತು ಶ್ರಮದಿಂದ, ಅವರು ಜಗತ್ತಿಗೆ ಉಸಿರು ನೀಡುವ ಹಸಿರು ಉಡುಗೊರೆಯನ್ನು ನೀಡಿದರು. 375 ಭವ್ಯವಾದ ಆಲದ ಮರಗಳು ಸೇರಿದಂತೆ 8,000 ಕ್ಕೂ ಹೆಚ್ಚು ಮರಗಳನ್ನು ನೆಟ್ಟು ಪೋಷಿಸಿದರು. ಅವರ ಜೀವನವು ಅಧಿಕಾರ ಅಥವಾ ಸಂಪತ್ತನ್ನು ಹುಡುಕುವ ಬಗ್ಗೆ ಆಗಿರಲಿಲ್ಲ. ಅದು ಭೂಮಿ ತಾಯಿಗೆ ಬೇಷರತ್ತಾದ ಪ್ರೀತಿಯ ಪ್ರತಿಜ್ಞೆಯಾಗಿತ್ತು' ಎಂದು ತಿಮ್ಮಕ್ಕನ ಶ್ರೇಷ್ಠತೆಯನ್ನು ಕೊಂಡಾಡಿದ್ದಾರೆ ಪವನ್, 114 ವರ್ಷ ವಯಸ್ಸಿನಲ್ಲಿ ಈ ಪ್ರಕೃತಿ ರಕ್ಷಕಿ ನಮ್ಮನ್ನು ಅಗಲಿದ್ದಾರೆ.

ಅವರ ಜೀವನವು ನಿಜವಾದ ಸಾರ್ವಜನಿಕ ಸೇವೆಯ ನಿಜವಾದ ಪಾಠವಾಗಿದೆ. ಜನಸೇನಾ ಪಕ್ಷದ ಪರವಾಗಿ, ಮಹಾನ್ ಸಾಲುಮರದ ತಿಮ್ಮಕ್ಕ ಅವರಿಗೆ ನನ್ನ ಆಳವಾದ ಗೌರವಗಳನ್ನು ಅರ್ಪಿಸುತ್ತೇನೆ. ನಾವು ನಮ್ಮ ವೃಕ್ಷಗಳ ತಾಯಿಯನ್ನು ಕಳೆದುಕೊಂಡಿದ್ದೇವೆ, ಆದರೆ ಅವರ ಆತ್ಮವು ನಮ್ಮೊಂದಿಗೆ ಉಳಿದಿದೆ. ಪರಿಸರ ಸಂರಕ್ಷಣೆಯ ಕಡೆಗೆ ಕೆಲಸ ಮಾಡಲು, ನಮ್ಮ ಸಮುದಾಯಗಳಲ್ಲಿ ಮರಗಳನ್ನು ನೆಡಲು ಮತ್ತು ನಮ್ಮ ಭೂಗ್ರಹಕ್ಕೆ ತೀರಾ ಅಗತ್ಯವಿರುವ ಜವಾಬ್ದಾರಿಯುತ ನಾಗರಿಕರಾಗಲು ಅವರು ನಮ್ಮೆಲ್ಲರಿಗೂ ಸ್ಪೂರ್ತಿ ನೀಡುತ್ತಲೇ ಇರುತ್ತಾರೆ' ಎಂದು ಪವನ್ ಕಲ್ಯಾಣ್ ಅಂತಿಮ ನಮನವನ್ನು ಸಲ್ಲಿಸಿದ್ದಾರೆ.

## ಬಿಹಾರ ಫಲಿತಾಂಶ: ಗಾಯಕಿ ಮೈಥಿಲಿ ಠಾಕೂರ್ ಅಲಿನಗರದಲ್ಲಿ ಐತಿಹಾಸಿಕ ಜಯ

ಬಿಹಾರದ 243 ವಿಧಾನಸಭಾ ಕ್ಷೇತ್ರಗಳ ಮತ ಎಣಿಕೆಯಲ್ಲಿ ಭರ್ಜರಿ ಗೆಲುವು, ಮುಖ್ಯಮಂತ್ರಿ ನೀತೀಶ್ ಕುಮಾರ್ ನೇತೃತ್ವದ ಎನ್‌ಡಿಎ (ಬಿಜೆಪಿ, ಜೆಡಿಯು ಸೇರಿದಂತೆ) ಮೈತ್ರಿಕೂಟ 207ಕ್ಕೂ ಹೆಚ್ಚು ಸ್ಥಾನಗಳಲ್ಲಿ ಮುನ್ನಡೆ ಸಾಧಿಸಿದೆ. ಬಹುಮತಕ್ಕೆ ಬೇಕಾದ 122 ಸ್ಥಾನಗಳ ಮ್ಯಾಜಿಕ್ ನಂಬರ್ ಅನ್ನು ತಲುಪುವಲ್ಲಿ ಎನ್‌ಡಿಎಗೆ ಯಾವ ಕಷ್ಟವೂ ಇಲ್ಲ. ಆದರೆ ತೇಜಸ್ವಿ ಯಾದವ್ ನೇತೃತ್ವದ ಮಹಾಘಟಬಂಧನ್ (ಆರ್‌ಜೆಡಿ, ಕಾಂಗ್ರೆಸ್, ಎಡ ಪಕ್ಷಗಳು) ಕೇವಲ 30-40 ಸ್ಥಾನಗಳೊಂದಿಗೆ ಹೆಣಗುತ್ತಿದೆ. ರಾಜಕೀಯ ತಂತ್ರಗಾರ ಪ್ರಶಾಂತ್ ಕಿಶೋರ್ ಅವರ 'ಜನ್ ಸುರಾಜ್' ಪಕ್ಷವು ಯಾವುದೇ ಸ್ಥಾನ ಗಳಿಸದೆ ಸೋಲು ಎದುರಿಸಿದ್ದು, ಚುನಾವಣೆಯಲ್ಲಿ ಯಾವ ಪರಿಣಾಮವೂ ಬೀರಲಿಲ್ಲ. ಈ ನಡುವೆ, ದರ್ಭಾಂಗ ಜಿಲ್ಲೆಯ ಅಲಿನಗರ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿ, ಜಾನಪದ ಗಾಯಕಿ ಮೈಥಿಲಿ ಠಾಕೂರ್ 8500ಕ್ಕೂ ಹೆಚ್ಚು ಮತಗಳ ಅಂತರದೊಂದಿಗೆ ಐತಿಹಾಸಿಕ ಗೆಲುವು ದಾಖಲಿಸಿದ್ದಾರೆ.

ಫಲಿತಾಂಶದ ಅಂಕಿಅಂಶಗಳು: ಎನ್‌ಡಿಎ ಭರ್ಜರಿ ಗೆಲುವು, ಮಹಾಘಟಬಂಧನ್ ಹೀನಾಯ ಸೋಲು ಚುನಾವಣಾ ಆಯೋಗದ (ಇಸಿ) ಟ್ರೆಂಡ್‌ಗಳ ಪ್ರಕಾರ, ಬಿಹಾರದ 243 ಸ್ಥಾನಗಳಲ್ಲಿ:

ಎನ್‌ಡಿಎ: 207 ಸ್ಥಾನಗಳಲ್ಲಿ ಮುನ್ನಡೆ (ಬಿಜೆಪಿ 91, ಜೆಡಿಯು 82, ಎಲ್‌ಜೆಪಿ(ಆರ್‌ವಿ) 20, ಹೆಚ್‌ಎಎಂ 09).

ಮಹಾಘಟಬಂಧನ್: 33 ಸ್ಥಾನಗಳು (ಆರ್‌ಜೆಡಿ ಮುಖ್ಯವಾಗಿ, ಕಾಂಗ್ರೆಸ್ ಕಡಿಮೆ ಸ್ಥಾನಗಳು).

ಜನ್ ಸುರಾಜ್: 0 ಸ್ಥಾನಗಳು – ಯಾವುದೇ ಮುನ್ನಡೆ ಇಲ್ಲ.

ಇತರೆ: ಏಐಎಂಐಎಂ 06 ಸ್ಥಾನಗಳಲ್ಲಿ ಮುನ್ನಡೆ.

ಈ ಫಲಿತಾಂಶಗಳು 2020ರ ಚುನಾವಣೆಯಲ್ಲಿ ಎನ್‌ಡಿಎ ಗಳಿಸಿದ 125 ಸ್ಥಾನಗಳಿಗಿಂತ ದೊಡ್ಡ ಗೆಲುವು. ಮಹಿಳಾ ಮತದಾರರ ಬೆಂಬಲ ಮತ್ತು 67.13% ಮತದಾನದಿಂದ ಜೆಡಿಯು ಗಣನೀಯ ಲಾಭ ಪಡೆದಿದೆ. ಚುನಾವಣೆ ಎರಡು ಹಂತಗಳಲ್ಲಿ (ನವೆಂಬರ್ 6 ಮತ್ತು 11) ನಡೆದಿದ್ದು, ಇದು 1951ರಿಂದ ದಾಖಲೆಯಾಗಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.